# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ


**ಸುಭಾಷಿತ:**

ಬದುಕಿನಲ್ಲಿ ಏನೇ ನಡೆದರೂ ಒಳ್ಳೆಯದೇ..
ವರ್ತಮಾನದಲ್ಲಿ ಏನಾಗುತ್ತಿದೆಯೋ ಅದೆಲ್ಲವೂ
ಉತ್ತಮವಾಗಿಯೇ ನಡೆಯುತ್ತಿದೆ..
ಮುಂದೆ ಏನಾಗಲಿದೆಯೋ ಅದು ಕೂಡ
ಚೆನ್ನಾಗಿಯೇ ನಡೆಯಲಿದೆ..
ಭವಿಷ್ಯದ ಬಗ್ಗೆ ಎಂದಿಗೂ ಚಿಂತಿಸಬೇಡಿ
ವರ್ತಮಾನದಲ್ಲಿಯೇ ಜೀವಿಸಿ..
**ಭಗವಾನ್ ಶ್ರೀಕೃಷ್ಣ**




PRGI No: KNKAN/25/A2498 www.karavalitharangini.com KARAVALI THARANGINI KANNADA Weekly Dakshina Kannada ದಿನಾಂಕ: 29-05-2026 to 04-06-2026 ಬೆಲೆ:10-00 ಸಂಪುಟ–1 ಸಂಚಿಕೆ–35 ಪುಟಗಳು–6






ಕ್ಷಣ ಕ್ಷಣದ ಸುದ್ದಿಗಳಿಗಾಗಿ
ಕರಾವಳಿ ತರಂಗಿಣಿ
ಪತ್ರಿಕಾ ಬಳಗದಿಂದ
ಅಂತರ್ಜಾಲ ಮಾಧ್ಯಮ

www.karavalitharangini.com

ಕರಾವಳಿ ತರಂಗಿಣಿ
ಮಂಗಳೂರು




**ಬೆಳ್ತಂಗಡಿಯ ದೀಪಕ್ ಜಿ. ಅವರು ಸ್ಥಾಪಿಸಿದ 'ರಾಜಕೇಸರಿ ಸೇವಾ ಟ್ರಸ್ಟ್' ಮೂಲಕ ಕಳೆದ ಒಂದು ದಶಕದಿಂದ ಅಶಕ್ತರ ಬಾಳಲ್ಲಿ ಬೆಳಕಾಗಿದ್ದಾರೆ. 34 ಮನೆಗಳ ನಿರ್ಮಾಣ, 12 ಜೋಡಿಗೆ ಸಾಮೂಹಿಕ ವಿವಾಹ, 900ಕ್ಕೂ ಅಧಿಕ ಸೇವಾ ಯೋಜನೆಗಳು ಹಾಗೂ ಕೋವಿಡ್ ಸಂಕಷ್ಟದ ಸಮಯದಲ್ಲಿ 45 ಮೃತದೇಹಗಳ ಅಂತಿಮ ಸಂಸ್ಕಾರದಂತಹ ನಿಸ್ವಾರ್ಥ ಸೇವೆ ಇವರದು. ಸ್ವತಃ ಬಸ್ ಚಾಲಕರಾಗಿ ದುಡಿಯುತ್ತಲೇ, ಸಮಾನ ಮನಸ್ಕರ ತಂಡದೊಂದಿಗೆ ಸೇವಾ ಕಾರ್ಯದಲ್ಲಿ ತೊಡಗಿಸಿಕೊಂಡಿರುವ ಇವರ ಅನನ್ಯ ಸೇವೆಗೆ, 2026 ಮೇ 24ರಂದು ಮಂಗಳೂರು ಪ್ರೆಸ್ ಕ್ಲಬ್ ತನ್ನ ವಾರ್ಷಿಕ ಪ್ರಶಸ್ತಿಯನ್ನು ನೀಡಿ ಗೌರವಿಸಿತು.**

# ಕರಾವಳಿ ಮೀನುಗಾರಿಕೆಗೆ ತಾತ್ಕಾಲಿಕ ವಿರಾಮ..!



**ಮಂಗಳೂರು:** ಮುಂಗಾರು ಮಳೆಯ ಆಗಮನಕ್ಕೆ ಕ್ಷಣಗಣನೆ ಆರಂಭವಾಗಿರುವ ಬೆನ್ನಲ್ಲೇ, ಕರಾವಳಿಯ ಜೀವನಾಡಿಯಾಗಿರುವ ಆಳಸಮುದ್ರ ಯಾಂತ್ರೀಕೃತ ಮೀನುಗಾರಿಕೆ ಚಟುವಟಿಕೆಗಳು ಈ ತಿಂಗಳಾಂತ್ಯಕ್ಕೆ ಅಧಿಕೃತವಾಗಿ ಸ್ಥಗಿತಗೊಳ್ಳಲಿವೆ. ಜೂನ್ 1ರಿಂದ ಜುಲೈ 31ರವರೆಗೆ ಸರ್ಕಾರವು 61 ದಿನಗಳ ಕಾಲ ಮೀನುಗಾರಿಕೆಗೆ ನಿಷೇಧ ಹೇರಿರುವ ಹಿನ್ನೆಲೆಯಲ್ಲಿ, ಕಡಲ ಮಕ್ಕಳು ತಮ್ಮ ಬೋಟುಗಳನ್ನು ದಡ ಸೇರಿಸುತ್ತಿದ್ದಾರೆ. ಕೆಲವರು ಈಗಾಗಲೇ ದಡ ಸೇರಿಸಿ ಆಗಿದೆ. ಈ ಬಾರಿಯ 2025–26ರ ಮೀನುಗಾರಿಕಾ **3ನೇ ಪುಟಕ್ಕೆ**

# ಸಿಎಂ ಗಾದಿಯತ್ತ ಡಿಕೆಶಿ: ಸವಾಲುಗಳ ಸಂಚಲನ..!

**ಬೆಂಗಳೂರು:** ರಾಜ್ಯ ರಾಜಕಾರಣದ ಕೇಂದ್ರ ಬಿಂದುವಾಗಿರುವ ಉಪಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್ ಮುಖ್ಯಮಂತ್ರಿ ಗಾದಿಯನ್ನು ಅಲಂಕರಿಸಿದರೆ, ರಾಜ್ಯದ ಆಡಳಿತ ಯಂತ್ರವು ಭಾರೀ ಬದಲಾವಣೆಗಳಿಗೆ ಸಾಕ್ಷಿಯಾಗಲಿದೆ. ಆದರೆ, ಈ ಅಧಿಕಾರದ ಹಾದಿಯು ಸುಗಮವಾಗಿಲ್ಲ ಎಂಬುದು ರಾಜಕೀಯ ವಿಶ್ಲೇಷಕರ ಅಭಿಪ್ರಾಯ. ರಾಜ್ಯದ ಪ್ರಸ್ತುತ ರಾಜಕೀಯ ವಾತಾವರಣದಲ್ಲಿ ಡಿ. ಕೆ. ಶಿವಕುಮಾರ್ ಅವರ ಸಂಭಾವ್ಯ ಮುಖ್ಯಮಂತ್ರಿ ಪದವಿಯು ಹಲವು ಗಂಭೀರ ಸವಾಲುಗಳನ್ನು ಹೊತ್ತು ತರಲಿದೆ. ಪಕ್ಷದೊಳಗಿನ ಆಂತರಿಕ ಸಮತೋಲನವನ್ನು ಕಾಪಾಡಿಕೊಳ್ಳುವುದು ಮೊದಲ ಮತ್ತು ಪ್ರಮುಖ ಸವಾಲಾಗಿದ್ದು, ಹಿರಿಯ ನಾಯಕರನ್ನು ವಿಶ್ವಾಸಕ್ಕೆ ತೆಗೆದುಕೊಂಡು, ಗುಂಪುಗಾರಿಕೆಗೆ ಅವಕಾಶ ನೀಡದಂತೆ ಪಕ್ಷವನ್ನು ಒಗ್ಗಟ್ಟಾಗಿ ಮುನ್ನಡೆಸಬೇಕಾದ ಜವಾಬ್ದಾರಿ **3ನೇ ಪುಟಕ್ಕೆ**



# ಕಟೀಲು ಮೇಳಗಳ ತಿರುಗಾಟದಲ್ಲಿ "ಶ್ರೀ ದೇವಿ ಮಹಾತ್ಮೆ" ಮೇಲುಗೈ

**ಮಂಗಳೂರು:** ಕರಾವಳಿಯ ಯಕ್ಷಗಾನ ಲೋಕದ ಧ್ರುವತಾರೆ ಎಂದೇ ಕರೆಯಲ್ಪಡುವ ಕಟೀಲು ಶ್ರೀ ದುರ್ಗಾಪರಮೇಶ್ವರಿ ಪ್ರಸಾದಿತ ದಶಾವತಾರ ಯಕ್ಷಗಾನ ಮಂಡಳಿಯ ಈ ಸಾಲಿನ ತಿರುಗಾಟವು ಅತ್ಯಂತ ವೈಭವದ 'ಸಪ್ತಕಲ್ಯಾಣ' ಪ್ರದರ್ಶನದೊಂದಿಗೆ ತೆರೆಕಂಡಿದೆ. ಕಟೀಲು ದೇವಸ್ಥಾನದ ರಥಬೀದಿಯಲ್ಲಿ ನಡೆದ ಪತ್ತನಾಜೆ ಸೇವೆಯಾಟದೊಂದಿಗೆ 189 ದಿನಗಳ ಸುದೀರ್ಘ ಯಕ್ಷಗಾನ ಪಯಣಕ್ಕೆ ಭವ್ಯ ತೆರೆಬಿದ್ದಿದೆ. ಈ ವಿಶೇಷ ದಿನದಂದು ದೇವಸ್ಥಾನದ ರಥಬೀದಿಯಲ್ಲಿ ನಿರ್ಮಿಸಲಾಗಿದ್ದ ಏಳು **3ನೇ ಪುಟಕ್ಕೆ**








# ಸಿಎಂ ಗಾದಿಯತ್ತ ಡಿಕೆಶಿ: ಸವಾಲುಗಳ ಸಂಚಲನ..!

**ಒಂದನೇ ಪುಟದಿಂದ......**

ಅವರ ಮೇಲಿದೆ. ಆದರೆ ಸ್ವಪಕ್ಷದಲ್ಲಿಯೇ ಶತ್ರುಗಳು ಹೆಚ್ಚಗಿರುವುದು ಈ ಮೊದಲೇ ರಾಷ್ಟ್ರ ಮಟ್ಟದಲ್ಲಿ ಚರ್ಚೆಯಾಗುತ್ತಿರುವ ವಿಷಯ. ಇದರ ಜೊತೆಗೆ, ರಾಜ್ಯದ ಆರ್ಥಿಕ ಪರಿಸ್ಥಿತಿಯನ್ನು ಸುಸ್ಥಿರಗೊಳಿಸುವುದು ಅತಿದೊಡ್ಡ ಪರೀಕ್ಷೆಯಾಗಲಿದೆ. ಪಂಚ ಗ್ಯಾರಂಟಿ ಯೋಜನೆಗಳಿಗಾಗಿ ಮೀಸಲಿಡಲಾದ ಬೃಹತ್ ಅನುದಾನ ಮತ್ತು ಅಭಿವೃದ್ಧಿ ಕಾರ್ಯಗಳಿಗೆ ಬೇಕಾದ ಬಂಡವಾಳದ ನಡುವೆ ಸಮತೋಲನ ಕಾಯ್ದುಕೊಳ್ಳುವುದು ಕಠಿಣ ಕೆಲಸವಾಗಿದೆ. ಇತ್ತ, ವಿರೋಧ ಪಕ್ಷಗಳಾದ ಬಿಜೆಪಿ ಮತ್ತು ಜೆಡಿಎಸ್‌ನ ತೀಕ್ಷ್ಣ ಟೀಕೆಗಳು ಮತ್ತು ಸದಾ ಸನ್ನದ್ಧವಾಗಿರುವ ಕಾನೂನು ತೊಡಕುಗಳನ್ನು ರಾಜಕೀಯ ಚಾಣಾಕ್ಷತೆಯಿಂದ ನಿಭಾಯಿಸಬೇಕಿದೆ. ಪ್ರಾದೇಶಿಕ ಮತ್ತು ಜಾತಿ ಸಮೀಕರಣಗಳನ್ನು ಸರಿದೂಗಿಸುತ್ತಲೇ, ತಾರತಮ್ಯವಿಲ್ಲದ ಆಡಳಿತವನ್ನು ನೀಡಿ ಸರ್ವ ಸಮುದಾಯಗಳ ನಂಬಿಕೆಯನ್ನು ಗಳಿಸಬೇಕಾದ ಅನಿವಾರ್ಯತೆ ಶಿವಕುಮಾರ್ ಅವರ ಮುಂದಿದೆ. ಕೇಂದ್ರ ಸರ್ಕಾರದೊಂದಿಗಿನ ಬಾಂಧವ್ಯವನ್ನು ರಾಜ್ಯದ ಹಿತಾಸಕ್ತಿಯ ದೃಷ್ಟಿಯಿಂದ ಮರುನಿರ್ಮಾಣ ಮಾಡಿಕೊಳ್ಳುವ ಸವಾಲು ಕೂಡ ಅವರ ಮುಂದಿದೆ. ಒಟ್ಟಾರೆಯಾಗಿ, ಡಿ. ಕೆ. ಶಿವಕುಮಾರ್ ಅವರ ಸಾಂಸ್ಥಿಕ ಬಲ ಮತ್ತು ರಾಜಕೀಯ ತಂತ್ರಗಾರಿಕೆ ಕೇವಲ ಪಕ್ಷದ ಮಟ್ಟಕ್ಕೆ ಸೀಮಿತವಾಗದೆ, ಮುಖ್ಯಮಂತ್ರಿ ಹುದ್ದೆಯಜವಾಬ್ದಾರಿಯನ್ನು ಹೇಗೆ ನಿರ್ವಹಿಸುತ್ತಾರೆ ಎಂಬುದು ಇಂದು ಇಡೀ ರಾಜ್ಯದ ಕುತೂಹಲಕ್ಕೆ ಕಾರಣವಾಗಿದೆ.

# ಕರಾವಳಿ ಮೀನುಗಾರಿಕೆಗೆ ತಾತ್ಕಾಲಿಕ ವಿರಾಮ..!

**ಒಂದನೇ ಪುಟದಿಂದ......**

ಋತುವು ಕರಾವಳಿಯ ಪಾಲಿಗೆ ಆರ್ಥಿಕವಾಗಿ ಬಂಪರ್ ಸಾಧನೆ ಮಾಡಿದೆ. ಕಳೆದ ಎರಡು ವರ್ಷಗಳಿಗಿಂತಲೂ ಈ ಬಾರಿ ಮೀನುಗಾರಿಕೆ ಕ್ಷೇತ್ರದಲ್ಲಿ ಗಣನೀಯ ಏರಿಕೆ ಕಂಡು ಬಂದಿದ್ದು, ಒಟ್ಟು 1,97,381 ಮೆಟ್ರಿಕ್‌ಟನ್ ಮೀನು ಲ್ಯಾಂಡಿಂಗ್ ದಾಖಲಾಗಿದೆ. ಇದರ ಒಟ್ಟು ಮೌಲ್ಯ ಬರೋಬ್ಬರಿ 3,856 ಕೋಟಿರೂ. ತಲುಪಿದ್ದು, ಕಳೆದ ವರ್ಷಕ್ಕಿಂತ 1,636 ಕೋಟಿರೂ. ಅಧಿಕ ಆದಾಯವನ್ನು ಮೀನುಗಾರಿಕೆ ಕ್ಷೇತ್ರ ಗಳಿಸಿದೆ. ಇಲಾಖೆಯ ಅಂಕಿಅಂಶಗಳ ಪ್ರಕಾರ, 2023–24ರಲ್ಲಿ 1,990 ಕೋಟಿ ರೂ. ಮತ್ತು 2024–25ರಲ್ಲಿ 2,220 ಕೋಟಿರೂ. ಮೌಲ್ಯದ ಮೀನುಗಾರಿಕೆ ನಡೆದಿತ್ತು. ಅಧಿಕಾರಿಗಳ ಪ್ರಕಾರ, ಸೆಪ್ಟೆಂಬರ್, ಅಕ್ಟೋಬರ್ ಮತ್ತು ಡಿಸೆಂಬರ್ ತಿಂಗಳುಗಳು ಮೀನುಗಾರಿಕೆಗೆ ಅತ್ಯಂತ ಪೂರಕವಾಗಿದ್ದವು. ಸೆಪ್ಟೆಂಬರ್ ಒಂದೇ ತಿಂಗಳಲ್ಲಿ 31 ಸಾವಿರ ಮೆಟ್ರಿಕ್‌ಟನ್‌ಗೂ ಅಧಿಕ ಮೀನು ಲ್ಯಾಂಡಿಂಗ್ ಆಗಿರುವುದು ಈ ಬಾರಿಯ ವಿಶೇಷವಾದರೂ, ಮೀನುಗಾರರ ದೃಷ್ಟಿಕೋನ ಸ್ವಲ್ಪ ಭಿನ್ನವಾಗಿದೆ. "ಋತುವಿನ ಆರಂಭದಲ್ಲಿ ಉತ್ತಮ ಮೀನು ಸಿಕ್ಕರೂ, ಬಳಿಕ ಹವಾಮಾನ ವೈಪರೀತ್ಯ ಮತ್ತು ಆಳಸಮುದ್ರದಲ್ಲಿ ಮೀನುಗಳ ಲಭ್ಯತೆ ಕಡಿಮೆಯಾಗಿದ್ದು ಸವಾಲಾಗಿತ್ತು. ಅಲ್ಲದೆ, ಡೀಸೆಲ್ ಮತ್ತು ನಿರ್ವಹಣಾ ವೆಚ್ಚದ ಹೊರೆ ಹೆಚ್ಚಿರುವುದು ಲಾಭಾಂಶದ ಮೇಲೆ ಪರಿಣಾಮ ಬೀರಿದೆ" ಎನ್ನುವುದು ಮೀನುಗಾರರ ಅಂಬೋಣ. ಸರ್ಕಾರದ ಆದೇಶದಂತೆ 10 ಎಚ್‌ಪಿ ಸಾಮರ್ಥ್ಯಕ್ಕಿಂತ ಮೇಲಿನ ಎಂಜಿನ್ ಬಳಸುವ ಯಾಂತ್ರೀಕೃತ ಬೋಟುಗಳಿಗೆ ನಿಷೇಧ ಅನ್ವಯಿಸಲಿದೆ. ಈ ಅವಧಿಯಲ್ಲಿ ಬಂದರುಗಳಲ್ಲಿ ಬೋಟುಗಳ ದುರಸ್ತಿ ಮತ್ತು ಬಲೆಗಳ ಸಿದ್ಧತೆ ನಡೆಯಲಿದ್ದು, ಹೊರ ರಾಜ್ಯಗಳಿಂದ ಬಂದಿದ್ದ ಕಾರ್ಮಿಕರು ತಮ್ಮ ಊರುಗಳಿಗೆ ಮರಳುತ್ತಿದ್ದಾರೆ. ಮುಂದಿನ ಎರಡು ತಿಂಗಳು ಮತ್ಸ್ಯ ಸಂತಾನಾಭಿವೃದ್ಧಿಯ ಕಾಲವಾಗಿರುವುದರಿಂದ, ಕಡಲ ಮಕ್ಕಳು ಮತ್ತೆ ಆಗಸ್ಟ್‌ನಲ್ಲಿ ಸಾಗರದ ಅಲೆಗಳತ್ತ ಮುಖ ಮಾಡಲಿದ್ದಾರೆ.

# ಕಟೀಲು ಮೇಳಗಳ ತಿರುಗಾಟದಲ್ಲಿ 'ಶ್ರೀ ದೇವಿ ಮಹಾತ್ಮೆ' ಮೇಲುಗೈ

**ಒಂದನೇ ಪುಟದಿಂದ......**

ಸುಸಜ್ಜಿತ ಮಂಟಪಗಳಲ್ಲಿ ದೇವರ ಚೌಕಿ ಪೂಜೆ ಏಕಕಾಲದಲ್ಲಿ ನೆರವೇರಿತು. ಆರು ರಂಗಸ್ಥಳಗಳಲ್ಲಿ ಏಕಕಾಲಕ್ಕೆ ಪೂರ್ವರಂಗ ಕುಣಿತದ ಅಬ್ಬರ ಮೇಳೈಸಿದ್ದು, ನೋಡುಗರ ಕಣ್ಮನ ಸೆಳೆಯಿತು. ರಾತ್ರಿಯಿಡೀ ನಡೆದ ಈ ಮಹೋತ್ಸವದಲ್ಲಿ ವಿವಿಧ ಮೇಳಗಳ ಕಲಾವಿದರು ಶಶಿಪ್ರಭಾ, ದ್ರೌಪದಿ, ಸುಭದ್ರೆ, ಸ್ವಯಂಪ್ರಭೆ, ಶಿವಪ್ರಭೆ, ರತಿ ಮತ್ತು ಪದ್ಮಾವತಿ ಕಲ್ಯಾಣಗಳಂತಹ ಐತಿಹಾಸಿಕ ಪ್ರಸಂಗಗಳನ್ನು ಅಭಿನಯಿಸಿ ಭಕ್ತರನ್ನು ಮಂತ್ರಮುಗ್ಧರನ್ನಾಗಿಸಿದರು. ಕಳೆದ ನವೆಂಬರ್ 17ರಿಂದ ಮೇ 25ರವರೆಗೆ ನಡೆದ ಈ ತಿರುಗಾಟದಲ್ಲಿ, ಆರು ಮೇಳಗಳು ಸೇರಿ ಒಟ್ಟು 1,323 ಪ್ರದರ್ಶನಗಳನ್ನು ನೀಡುವ ಮೂಲಕ ದಾಖಲೆ ನಿರ್ಮಿಸಿವೆ. ಈ ಪೈಕಿ ಕರಾವಳಿಯ ಆರಾಧ್ಯ ದೈವದ ಮಹಿಮೆಯನ್ನು ಸಾರುವ 'ಶ್ರೀ ದೇವಿ ಮಹಾತ್ಮೆ' ಪ್ರಸಂಗವೊಂದೇ 700ಕ್ಕೂ ಹೆಚ್ಚು ಬಾರಿ ಪ್ರದರ್ಶನಗೊಂಡಿರುವುದು ವಿಶೇಷ. ಇದೀಗ ಮೇಳಗಳ ತಿರುಗಾಟಕ್ಕೆ ವಿರಾಮ ದೊರೆತಿದ್ದು, ಕಲಾವಿದರು ಅಲ್ಪಾವಧಿಯ ವಿರಾಮದತ್ತ ಮುಖಮಾಡಿದ್ದಾರೆ. ನವೆಂಬರ್ 16 ರಂದು ಮೇಳಗಳು ಮತ್ತೆ ರಂಗಸ್ಥಳಕ್ಕಿಳಿಯಲಿವೆ. ಅಷ್ಟರವರೆಗೆ ಹಲವು ಕಲಾವಿದರು ಕೃಷಿ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡರೆ, ಇನ್ನು ಕೆಲವರು ಮಳೆಗಾಲದ ವಿಶೇಷಯಕ್ಷಗಾನ ತಾಳಮದ್ದಳೆ ಕಾರ್ಯಕ್ರಮಗಳ ಮೂಲಕ ಕಲಾಸೇವೆಯನ್ನು ಮುಂದುವರಿಸಲಿದ್ದಾರೆ.

# ಉದ್ಯೋಗಾವಕಾಶ : ಜೂನ್ 01ರಂದು ಸಂದರ್ಶನ

ಮಂಗಳೂರು: ಬ್ಲಿಂಕಿಟ್ ಕಂಪೆನಿಯ ವತಿಯಿಂದ ಮಂಗಳೂರಿನಲ್ಲಿ ಖಾಲಿ ಇರುವ ಪಿಕ್ಕರ್ ಹಾಗೂ ಪ್ಯಾಕರ್ ಹುದ್ದೆಗೆ ನೇರ ಸಂದರ್ಶನವನ್ನು ಜೂನ್ 1ರಂದು ಬೆಳಿಗ್ಗೆ 10 ರಿಂದ ಸಂಜೆ 5ರವರೆಗೆ ನಗರದ ಫಳ್ನೀರ್ ರಸ್ತೆಯ ಮೋತಿ ಮಹಲ್ ಎದುರುಗಡೆ ಇರುವ ಬ್ಲಿಂಕಿಟ್‌ನಲ್ಲಿ ಆಯೋಜಿಸಲಾಗಿದೆ. ಕಂಪೆನಿ ವತಿಯಿಂದ ಪಿ.ಎಫ್, ಇ.ಎಸ್.ಐ, ಬೋನಸ್ ಸೌಲಭ್ಯ ಇರುತ್ತದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಮಂಗಳೂರು ಇಲ್ಲಿ ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಉನ್ನತ ಬೌದ್ಧಿಕ ಆಸ್ತಿ ಹಕ್ಕುಗಳು– ತರಬೇತಿ ಕಾರ್ಯಾಗಾರ

ಮಂಗಳೂರು: - ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯ ವತಿಯಿಂದ 'ಉನ್ನತ ಬೌದ್ಧಿಕ ಆಸ್ತಿ ಹಕ್ಕುಗಳು' (Advanced Intellectual Property Rights (IPR)) ವಿಷಯದ ಮೇಲೆ ಜೂನ್ 16ರಿಂದ ಜೂನ್ 20ರವರೆಗೆ 5ದಿನಗಳ ತರಬೇತಿ ಕಾರ್ಯಾಗಾರವನ್ನು ಬೆಂಗಳೂರು ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ಕಛೇರಿಯಲ್ಲಿ ಆಯೋಜಿಸಲಾಗುತ್ತಿದೆ. ಹೆಚ್ಚಿನ ಮಾಹಿತಿಗೆ ಕಾರ್ಯಾಗಾರದ ಸಂಯೋಜಕ ವಿ.ಜಿ. ಉಮೇಶ ವೈಜ್ಞಾನಿಕಾಧಿಕಾರಿ (ಮೊ: 9743084194) ಸಂಪರ್ಕಿಸಬಹುದು ಅಥವಾ ಅಕಾಡೆಮಿಯ ವೆಬ್‌ಸೈಟ್ https://kstacademy.in ವೀಕ್ಷಿಸಬಹುದು ಎಂದು ಅಕಾಡೆಮಿ ಪ್ರಕಟಣೆ ತಿಳಿಸಿದೆ.

# ಕೋ-ಆಪರೇಟಿವ್ ಮ್ಯಾನೇಜ್‌ಮೆಂಟ್ ತರಬೇತಿಗೆ ಅರ್ಜಿ ಆಹ್ವಾನ

ಶಿವಮೊಗ್ಗ :ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್‌ಕೋ-ಆಪರೇಟಿವ್ ಮ್ಯಾನೇಜ್‌ಮೆಂಟ್ ಶಿವಮೊಗ್ಗ ಇವರ ವತಿಯಿಂದ 01.07.2026 ರಿಂದ ಪ್ರಾರಂಭವಾಗುವ ಸಹಕಾರ ಸಂಘ/ಸಂಸ್ಥೆಗಳ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ 6 ತಿಂಗಳ ದೂರಶಿಕ್ಷಣ ಮತ್ತು ಇತರೆ ಎಲ್ಲಾ ಅಭ್ಯರ್ಥಿಗಳಿಗೆ ರೆಗ್ಯುಲರ್ ಡಿಪ್ಲೊಮಾ ಇನ್ ಕೋ-ಆಪರೇಟಿವ್ ಮ್ಯಾನೇಜ್‌ಮೆಂಟ್ ತರಬೇತಿಗೆ ಪ್ರವೇಶ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂ. ಸಂ : 08182 248873, 9449075746, 9845068191, 7022441115, 7026246493, 9482216930ನ್ನು ಸಂಪರ್ಕಿಸಬಹುದು ಎಂದು ಕರ್ನಾಟಕ ಇನ್ಸಿಟ್ಯೂಟ್ ಆಫ್ ಕೋ ಮ್ಯಾನೇಜ್‌ಮೆಂಟ್ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

# ರಂಗಶಿಕ್ಷಣ ತರಬೇತಿಗೆ (ಡಿಪ್ಲೋಮಾ) ಅರ್ಜಿ ಆಹ್ವಾನ

ಮಡಿಕೇರಿ : ರಂಗಶಿಕ್ಷಣದಲ್ಲಿ ಹತ್ತು ತಿಂಗಳ ಡಿಪ್ಲೊಮೊ ಕೋರ್ಸನ್ನು ನಡೆಸುವ ಈ ಸಂಸ್ಥೆಯು ಪ್ರಸ್ತುತ 2026–27ನೇ ಸಾಲಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ವಿವರಕ್ಕಾಗಿ ದೂರವಾಣಿ ಸಂಖ್ಯೆ: 0821–2512639 ನ್ನು ಸಂಪರ್ಕಿಸಬಹುದು.

# ಡಿಪ್ಲೊಮಾ ಸಹಕಾರ ನಿರ್ವಹಣಾ ತರಬೇತಿಗೆ ಅರ್ಜಿ ಆಹ್ವಾನ

ಮಡಿಕೇರಿ : ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕೋ-ಆಪರೇಟಿವ್ ಮ್ಯಾನೇಜ್‌ಮೆಂಟ್ ಮಡಿಕೇರಿ ಸಹಕಾರ ತರಬೇತಿ ಸಂಸ್ಥೆಯು 6 ತಿಂಗಳ ಅವಧಿಯ ರೆಗ್ಯೂಲರ್ ಡಿಪ್ಲೊಮಾ ಇನ್ ಕೋ-ಆಪರೇಟಿವ್ ಮ್ಯಾನೇಜ್‌ಮೆಂಟ್ ಕೋರ್ಸ್‌ಗೆ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ 9663153922, 8762925862, 8762110952ನ್ನು ಸಂಪರ್ಕಿಸಬಹುದು.

# ದಕ್ಷಿಣ ಕನ್ನಡ ಜಿಲ್ಲೆಗೆ ಉಪರಾಷ್ಟ್ರಪತಿ ಭೇಟಿ



ಮಂಗಳೂರು: ಭಾರತದ ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಅವರು ಮೇ 30 ಹಾಗೂ 31ರಂದು ದ.ಕ. ಜಿಲ್ಲೆಗೆ ಎರಡು ದಿನಗಳ ಭೇಟಿ ನೀಡಲಿದ್ದಾರೆ. ಮೇ 30ರಂದು ಸಂಜೆ 4:25ಕ್ಕೆ ಮಂಗಳೂರು ವಿಮಾನ ನಿಲ್ದಾಣಕ್ಕೆ ಆಗಮಿಸಲಿರುವ ಅವರು, ಅಲ್ಲಿಂದ ಹೊರಟು ಸಂಜೆ 5:05ಕ್ಕೆ ಧರ್ಮಸ್ಥಳ ಹೆಲಿಪ್ಯಾಡ್ ತಲುಪಲಿದ್ದಾರೆ. ಅಂದು ರಾತ್ರಿ ಧರ್ಮಸ್ಥಳದ ಅತಿಥಿಗೃಹದಲ್ಲಿಯೇ ವಾಸ್ತವ್ಯ ಹೂಡಲಿದ್ದಾರೆ. ಮರುದಿನ ಮೇ 31ರಂದು ಬೆಳಿಗ್ಗೆ 8 ಗಂಟೆಗೆ ಶ್ರೀ ಕ್ಷೇತ್ರ ಧರ್ಮಸ್ಥಳದ ಮಂಜುನಾಥ ಸ್ವಾಮಿ ದೇವಾಲಯಕ್ಕೆ ಭೇಟಿ ನೀಡಿ ದೇವರ ದರ್ಶನ ಪಡೆಯಲಿದ್ದಾರೆ. ಬಳಿಕ ಬೆಳಿಗ್ಗೆ 11 ಗಂಟೆಗೆ ಬೆಳ್ತಂಗಡಿಯಲ್ಲಿ ಆಯೋಜಿಸಲಾಗಿರುವ 'ಸಿರಿ ಇಂಡಸ್ಟ್ರಿಯಲ್ ಪಾರ್ಕ್' ಉದ್ಘಾಟನಾ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ.

# ಕಂಕನಾಡಿ–ಪಂಪ್‌ವೆಲ್ ರಸ್ತೆ ಜೂನ್ 10ಕ್ಕೆ ಒಂದು ಬದಿಯ ಸಂಚಾರ ಮುಕ್ತ



ಮಂಗಳೂರು : ನಗರದ ಅತ್ಯಂತ ಪ್ರಮುಖ ಕಾಮಗಾರಿಯಾಗಿದ್ದು, ನಗರದ ಪ್ರವೇಶ ದ್ವಾರ ಎಂದೇ ಕರೆಯಲ್ಪಡುವ ಕಂಕನಾಡಿ ಪಂಪ್‌ವೆಲ್ ರಸ್ತೆಯ ಕಾಂಕ್ರೀಟೀಕರಣದ ಒಂದು ಭಾಗದ ಕಾಮಗಾರಿಯು ಯಶಸ್ವಿಯಾಗಿ ಮುಕ್ತಾಯಗೊಂಡಿದೆ. ಸದ್ಯ ಬಾಕಿ ಉಳಿದಿರುವ ಸಣ್ಣಪುಟ್ಟ ಕೆಲಸಗಳು ಹಾಗೂ ಚರಂಡಿ ವ್ಯವಸ್ಥೆಯ ನೀರಿನ ಸುಗಮ ಸಂಚಾರದ ಕಾರ್ಯಗಳನ್ನು ಪೂರ್ಣಗೊಳಿಸಿ, ಬರುವ ಜೂನ್ 10 ರಂದು ಈ ರಸ್ತೆಯನ್ನು ಸಾರ್ವಜನಿಕ ಸಂಚಾರಕ್ಕೆ ಮುಕ್ತಗೊಳಿಸಲಾಗುವುದು ಎಂದು ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಐವನ್ ಡಿ'ಸೋಜಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಮಳೆಗಾಲದಲ್ಲಿ ಯಾವುದೇ ಕಾರಣಕ್ಕೂ ನೀರು ರಸ್ತೆಯ ಪಕ್ಕದ ಅಂಗಡಿ ಮುಂಗಟ್ಟುಗಳಿಗೆ ನುಗ್ಗದಂತೆ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ವಹಿಸಬೇಕು ಎಂದು ಇಂಜಿನಿಯರ್‌ಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

# ರುಡ್ ಸೆಟ್ ಸಂಸ್ಥೆಯಿಂದ ಉಚಿತ ಕೋಳಿ ಸಾಕಾಣಿಕೆ ತರಬೇತಿ




ಉಜಿರೆ: ಸ್ವಂತ ಉದ್ಯಮ ಆರಂಭಿಸುವ ಕನಸಿರುವ ಯುವಜನರಿಗೆ ಹಾಗೂ ಕೃಷಿಯಲ್ಲಿ ಹೊಸ ಆದಾಯ ಮಾರ್ಗ ಹುಡುಕುತ್ತಿರುವ ಕೃಷಿ ಬಂಧುಗಳಿಗೆ ರುಡ್ ಸೆಟ್ ಸಂಸ್ಥೆಯು ಒಂದು ಸುವರ್ಣಾವಕಾಶವನ್ನು ಕಲ್ಪಿಸಿಕೊಟ್ಟಿದೆ. ಭಾರತ ಸರ್ಕಾರದ ಗ್ರಾಮೀಣ ಅಭಿವೃದ್ಧಿ ಇಲಾಖೆಯಿಂದ ಮಾನ್ಯತೆ ಪಡೆದು, ಪರಮಪೂಜ್ಯ ಡಾ. ಡಿ. ವೀರೇಂದ್ರ ಹೆಗ್ಗಡೆಯವರ ಅಧ್ಯಕ್ಷತೆಯಲ್ಲಿ ಹಾಗೂ ಕೆನರಾ ಬ್ಯಾಂಕ್ ಪ್ರಾಯೋಜಕತ್ವದಲ್ಲಿ ಕಾರ್ಯನಿರ್ವಹಿಸುತ್ತಿರುವ ಉಜಿರೆಯ ರುಡ್ ಸೆಟ್ ಸಂಸ್ಥೆಯಲ್ಲಿ ಈ ವಿಶೇಷ ತರಬೇತಿಯನ್ನು ಆಯೋಜಿಸಲಾಗಿದೆ. 2026ರ ಜೂನ್ 01ರಿಂದ ಜೂನ್ 13ರವರೆಗೆ ಒಟ್ಟು 13 ದಿನಗಳ ಕಾಲ "ಕೃಷಿ ಉದ್ಯಮಿ – ಕೋಳಿ ಸಾಕಾಣಿಕೆ" ಸಂಪೂರ್ಣ ಉಚಿತ ತರಬೇತಿ ಕಾರ್ಯಕ್ರಮವು ಸಂಸ್ಥೆಯ ಆವರಣದಲ್ಲಿ ನಡೆಯಲಿದೆ.

# ತಡೆಗೋಡೆ ನಿರ್ಮಾಣಕ್ಕೆ ಶಾಸಕ ಕಾಮತ್‌ರಿಂದ ಗುದ್ದಲಿ ಪೂಜೆ



ಮಂಗಳೂರು: ಮಂಗಳೂರು ಮಹಾನಗರ ಪಾಲಿಕೆಯ 34 ನೇ ಕದ್ರಿ ಶಿವಭಾಗ್ ವಾರ್ಡ್ ವ್ಯಾಪ್ತಿಯ ಬಿಕರ್ನಕಟ್ಟೆ ನಾಗಬ್ರಹ್ಮ ದೈವಸ್ಥಾನದ ಸಮೀಪದ ರಾಜಕಾಲುವೆಗೆ ತಡೆಗೋಡೆ ನಿರ್ಮಿಸುವ ಕಾಮಗಾರಿಗೆ ಶಾಸಕ ವೇದವ್ಯಾಸ ಕಾಮತ್ ಅವರು ಗುದ್ದಲಿ ಪೂಜೆ ನೆರವೇರಿಸಿದರು. ಲೋಕೋಪಯೋಗಿ ಇಲಾಖೆಯ ರೂ. 30 ಲಕ್ಷಗಳ ವಿಶೇಷ ಅನುದಾನದಲ್ಲಿ ಈ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗಿದೆ. ಕಾರ್ಯಕ್ರಮದ ಬಳಿಕ ಮಾತನಾಡಿದ ಶಾಸಕ ವೇದವ್ಯಾಸ ಕಾಮತ್, ಮಳೆಗಾಲದಲ್ಲಿ ಈ ಪ್ರದೇಶದಲ್ಲಿ ಉಂಟಾಗುತ್ತಿದ್ದ ಸಮಸ್ಯೆಯನ್ನು ಪರಿಹರಿಸುವಂತೆ ಸ್ಥಳೀಯರು ಮನವಿ ಮಾಡಿದ್ದರು. ಅದರಂತೆ ತಡೆಗೋಡೆ ನಿರ್ಮಾಣದಿಂದ ಮಳೆಗಾಲದ ಭೀತಿ ದೂರವಾಗಲಿದೆ ಎಂದರು. ನಿಕಟಪೂರ್ವ ಪಾಲಿಕೆ ಸದಸ್ಯೆ ಕಾವ್ಯ ನಟರಾಜ್ ಆಳ್ವ, ವಾರ್ಡ್ ಅಧ್ಯಕ್ಷ ವಿಕ್ರಂ ಚೌಟ, ಯೋಗಿಶ್ ಶೆಣೈ, ನವೀನ್ ಶೆಣೈ ಸೇರಿದಂತೆ ಪ್ರಮುಖರು ಉಪಸ್ಥಿತರಿದ್ದರು.

# ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಮತ್ತು ಬೆಲೆ ಏರಿಕೆ ವಿರೋಧಿಸಿ ಕಾಂಗ್ರೆಸ್ ಪ್ರತಿಭಟನೆ



ಬಂಟ್ವಾಳ : ಬಂಟ್ವಾಳ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಬಂಟ್ವಾಳ ಹಾಗೂ ಪಾಣೆಮಂಗಳೂರು ಬ್ಲಾಕ್ ಕಾಂಗ್ರೆಸ್, ಯುವ ಕಾಂಗ್ರೆಸ್, ಎನ್‌ಎಸ್‌ಯುಐ ಮತ್ತು ಮಹಿಳಾ ಕಾಂಗ್ರೆಸ್ ವತಿಯಿಂದ ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ಮತ್ತು ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆ ವಿರುದ್ಧ ಬಿ.ಸಿ. ರೋಡಿನ ಫ್ಲೈ ಓವರ್ ಕೆಳಭಾಗದಲ್ಲಿ ಪ್ರತಿಭಟನೆ ನಡೆಯಿತು. ಮಾಜಿ ಸಚಿವ ಹಾಗೂ ಕ್ಷೇತ್ರದ ಮಾಜಿ ಶಾಸಕ ಬಿ. ರಮಾನಾಥ ರೈ ಅವರ ನೇತೃತ್ವದಲ್ಲಿ ನಡೆದ ಈ ಪ್ರತಿ ಭಟನೆಯನ್ನುದ್ದೇಶಿಸಿ ಅವರು ಮಾತನಾಡಿದರು. ಮೋದಿ ಏನು ಮಾಡಿದರೂ ಸರಿ ಎನ್ನುವ ಭಕ್ತರು ಹಾಗೂ ಮೂರ್ಖರು ಇಲ್ಲಿದ್ದಾರೆ ಎಂದು ಅವರು ಲೇವಡಿ ಮಾಡಿದರು. ಇದೇ ವೇಳೆ, ರಾಹುಲ್ ಗಾಂಧಿ ಅವರಿಗೆ ಒಮ್ಮೆ ಅವಕಾಶ ಮಾಡಿಕೊಡಿ ಯಾವ ರೀತಿ ಆಡಳಿತ ಮಾಡುತ್ತಾರೆ ಎಂಬುದನ್ನು ನೋಡಿ ಎಂದು ವಿನಂತಿಸಿದರು.

# ಅಂಗನವಾಡಿ ಕಟ್ಟಡಕ್ಕೆ ಶಾಸಕ ಡಾ. ವೈ ಭರತ್ ಶೆಟ್ಟಿ ಶಿಲಾನ್ಯಾಸ



ಮಂಗಳೂರು: ನಗರದ ಬೊಂದೇಲ್ ಕಂಬ್ಳ ಅಶ್ವತ್ಥ ಕಟ್ಟೆ ಸಮೀಪದ ಪಿ.ಡಬ್ಲ್ಯೂ.ಡಿ. (PWD) ಕಚೇರಿಯ ಮುಂಭಾಗದಲ್ಲಿ, ಮಂಗಳೂರು ನಗರ ಶಿಶು ಅಭಿವೃದ್ಧಿ ಯೋಜನೆಯಡಿ ನಿರ್ಮಾಣವಾಗಲಿರುವ ಮಹಾತ್ಮ ಗಾಂಧಿ ಅಂಗನವಾಡಿ ಕಟ್ಟಡಕ್ಕೆ ಮಂಗಳೂರು ಉತ್ತರ ವಿಧಾನ ಸಭಾ ಕ್ಷೇತ್ರದ ಶಾಸಕ ಡಾ. ವೈ ಭರತ್ ಶೆಟ್ಟಿಯವರು ಶಿಲಾನ್ಯಾಸ ನೆರವೇರಿಸಿದರು. 2024–25ನೇ ಸಾಲಿನ ನಗರ ಯೋಜನೆಯಡಿ ಸುಮಾರು 20 ಲಕ್ಷ ರೂ. ವೆಚ್ಚದಲ್ಲಿ ಈ ನೂತನ ಕಟ್ಟಡವನ್ನು ನಿರ್ಮಾಣ ಮಾಡಲಾಗುತ್ತಿದೆ. ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಯೋಜನಾಧಿಕಾರಿ ಶ್ರೀಮತಿ ಶ್ವೇತಾ ಎನ್., ಭೂನ್ಯಾಯ ಮಂಡಳಿಯ ಮಾಜಿ ಸದಸ್ಯ ಶ್ರೀ ಸಂದೀಪ್, ಪ್ರಮುಖರಾದ ಶ್ರೀ ಶಿವಾಜಿ ಕುಲಾಲ್, ಶ್ರೀ ರವೀಂದ್ರ ನಾಯ್ಕ್, ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸ್ಥಳೀಯ ನಾಗರಿಕರು ಉಪಸ್ಥಿತರಿದ್ದರು.

# ಮಂಗಳೂರು ನಗರದಲ್ಲಿ ಸುರಕ್ಷತಾ ಸಂಕಲ್ಪ ಜಾಥ



ಮಂಗಳೂರು: ನಗರದ ಬೆಸೆಂಟ್ ಮಹಿಳಾ ಕಾಲೇಜಿನಿಂದ ಪಿವಿಎಸ್ ವೃತ್ತದವರೆಗೆ ರೋಟರಿ ಕ್ಲಬ್ ಮಂಗಳೂರು ಸೆಂಟ್ರಲ್ ಮತ್ತು ಬೆಸೆಂಟ್ ಮಹಿಳಾ ಕಾಲೇಜಿನ ಯುವ ರೆಡ್‌ಕ್ರಾಸ್ ಘಟಕದ ವತಿಯಿಂದ ಸುರಕ್ಷಾ ಸಂಕಲ್ಪ ಜಾಥಾ ನಡೆಯಿತು. ಮಂಗಳೂರು ಪೊಲೀಸ್ ಕಮೀಷನರೇಟ್ ಸಂಚಾರ ವಿಭಾಗದ ಎಸಿಪಿ ಗೀತಾ ಕುಲಕರ್ಣಿ. ಸುರಕ್ಷಾ ಜಾಥಾಕ್ಕೆ ಚಾಲನೆ ನೀಡಿ ಮಾತನಾಡುತ್ತಾ, ರಸ್ತೆ ಸಂಚಾರ ನಿಯಮದ ಪಾಲನೆ ಯಿಂದ ನಮ್ಮ ಜೀವದ ರಕ್ಷಣೆಯ ಜೊತೆ ಇತರರ ಜೀವವನ್ನು ಉಳಿಸಬಹುದು. ನಾಗರೀಕರಿಗೂ ರಸ್ತೆ ಸಂಚಾರ ನಿಯಮಗಳ ಬಗ್ಗೆ ಜಾಗೃತಿ ಅಗತ್ಯವಿದೆ. ಇದರಿಂದಲೂ ಸಾಕಷ್ಟು ಅಪಘಾತಗಳನ್ನು ತಪ್ಪಿಸಲು ಸಾಧ್ಯ ವಿದೆ ಈ ಹಿನ್ನೆಲೆಯಲ್ಲಿ ಸುರಕ್ಷತಾ ಜಾಥಾ ಹಮ್ಮಿಕೊಂಡಿರುವುದು ಶ್ಲಾಘನೀಯ ಎಂದರು.

# ಜನವಾದಿ ಮಹಿಳಾ ಸಂಘಟನೆಯಿಂದ ಬೃಹತ್ ಪ್ರತಿಭಟನೆ




ಮಂಗಳೂರು : ದಕ್ಷಿಣ ಕನ್ನಡ ಜಿಲ್ಲೆಯ ನಗರ ಮತ್ತು ಗ್ರಾಮಾಂತರ ಪ್ರದೇಶದ ಎಲ್ಲಾ ರೂಟ್‌ಗಳಲ್ಲೂ ಸರ್ಕಾರಿ ಬಸ್‌ಗಳ ಸಂಚರಿಸಲು ಸೂಕ್ತ ಕ್ರಮ ಜರುಗಿಸಬೇಕು ಎಂದು ಆಗ್ರಹಿಸಿ ಜನವಾದಿ ಮಹಿಳಾ ಸಂಘಟನೆಯ ನಗರದ ಬಿಜ್ಯೈ ಸರ್ಕಾರಿ ಬಸ್ ನಿಲ್ದಾಣದ ಮುಂದೆ ಬೃಹತ್ ಪ್ರತಿಭಟನೆ ನಡೆಸಿತು. ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡಿದ ಜನವಾದಿ ಮಹಿಳಾ ಸಂಘಟನೆಯ ರಾಜ್ಯ ಪ್ರಧಾನ ಕಾರ್ಯದರ್ಶಿ ದೇವಿ ಅವರು, ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆ 'ಶಕ್ತಿ ಯೋಜನೆ'ಯ ಪ್ರಯೋಜನವು ಪ್ರತಿಯೊಂದು ಹಳ್ಳಿಯ ಮಹಿಳೆಯರಿಗೂ ಲಭಿಸುವಂತಾಗಬೇಕು ಎಂದು ಒತ್ತಾಯಿಸಿದರು. ಖಾಸಗಿ ಬಸ್‌ಗಳಲ್ಲಿ ದುಬಾರಿ ದರ ನೀಡಿ ಸಂಚರಿಸುವುದು ದಿನಗೂಲಿ ನಂಬಿ ಬದುಕುವ ದುಡಿಯುವ ಮಹಿಳೆಯರಿಗೆ ಆರ್ಥಿಕವಾಗಿ ಬಹಳ ಕಷ್ಟವಾಗುತ್ತಿದೆ ಎಂದು ಅವರು ತೀವ್ರ ಕಳವಳ ವ್ಯಕ್ತಪಡಿಸಿದರು.

# ಕೃಷಿ ಕ್ಷೇತ್ರ ಪಾಠ ಶಾಲೆಗೆ ಚಾಲನೆ : ಕೃಷಿಯತ್ತ ಯುವಜನತೆಯ ಒಲವು



ಮಂಗಳೂರು: ತರುಣ ಭಾರತ ಚಾರಿಟೇಬಲ್ ಟ್ರಸ್ಟ್ (ರಿ.) ಹೆಮ್ಮುಂಡೆ ಇದರ ವತಿಯಿಂದ ಆಯೋಜಿಸಲಾದ ನೂತನ ಸರಣಿ ಕಾರ್ಯಕ್ರಮ 'ಕೃಷಿ ಕ್ಷೇತ್ರ ಪಾಠಶಾಲೆ'ಯ ಉದ್ಘಾಟನಾ ಸಮಾರಂಭವು ಇತ್ತೀಚೆಗೆ ಹೆಮ್ಮುಂಡೆಯ ಮಹಾದೇವ್ ಫಾರ್ಮ್ಸ್‌ನಲ್ಲಿ ಜರುಗಿತು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ತರುಣ ಭಾರತ ಕ್ರೆಡಿಟ್ ಕೋ ಆಪರೇಟಿವ್ ಸೊಸೈಟಿಯ ನಿರ್ದೇಶಕಿ ಶ್ರೀಮತಿ ಇಂದುಮತಿ ಅಶೋಕ್ ಸಾಲಿಯಾನ್ ವಹಿಸಿದ್ದರು. ವಿಟ್ಲದ ಗೋ ಆಧಾರಿತ ಕೃಷಿಕರಾದ ಶ್ರೀ ಪ್ರವೀಣ್ ಸರಳಾಯ ಅವರು ಕಲ್ಪವೃಕ್ಷಕ್ಕೆ ನೀರೆರೆಯುವ ಮೂಲಕ ಕಾರ್ಯಕ್ರಮಕ್ಕೆ ವಿದ್ಯುಕ್ತ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ರಾಸಾಯನಿಕಗಳಿಗೆ ಪರ್ಯಾಯವಾಗಿ ಗೋ ಉತ್ಪನ್ನಗಳನ್ನು ಕೃಷಿಯಲ್ಲಿ ಬಳಸುವುದರಿಂದ ಸಿಗುವ ಲಾಭಗಳು ಮತ್ತು ಸಾವಯವ ಕೃಷಿಯ ಮೂಲಕ ಪರಿಸರ ಸಂರಕ್ಷಣೆಯ ಮಹತ್ವದ ಕುರಿತು ಸವಿವರವಾಗಿ ತಿಳಿಸಿದರು.

# 'ಪಾಲೆಮಾರ್ ಕನ್ವೆನ್ಶನ್ ಸೆಂಟರ್'ನಲ್ಲಿ ಅದ್ದೂರಿಯಾಗಿ ಲೋಕಾರ್ಪಣೆ




ಮಂಗಳೂರು: ಕರಾವಳಿಯ ಇತಿಹಾಸದಲ್ಲೇ ಪ್ರಪ್ರಥಮ ಬಾರಿಗೆ ಮಾಜಿ ಸಚಿವ ಹಾಗೂ ವಿಕಾಸ ಎಜುಕೇಶನ್ ಟ್ರಸ್ಟ್‌ನ ಅಧ್ಯಕ್ಷ ಕೃಷ್ಣ ಜೆ. ಪಾಲೆಮಾರ್ ಅವರ ನೇತೃತ್ವದಲ್ಲಿ ನಿರ್ಮಾಣಗೊಂಡಿರುವ ನಾಲ್ಕು ಅತ್ಯಾಧುನಿಕ ಸಭಾಭವನಗಳು ಶನಿವಾರ ನಗರದ ಮೇರಿಹಿಲ್‌ನಲ್ಲಿರುವ 'ಪಾಲೆಮಾರ್ ಕನ್ವೆನ್ಶನ್ ಸೆಂಟರ್'ನಲ್ಲಿ ಅದ್ದೂರಿಯಾಗಿ ಲೋಕಾರ್ಪಣೆಗೊಂಡವು. ಮೇರಿಹಿಲ್‌ನ ಪಾಲೆಮಾರ್ ಕನ್ವೆನ್ಶನ್ ಸೆಂಟರ್, ಮೊರ್ಗನ್ಸ್ ಗೇಟ್‌ನ ಪಾಲೆಮಾರ್ ಗಾರ್ಡನ್, ಸುರತ್ಕಲ್‌ನ ಪಾಲೆಮಾರ್ ಫಾರ್ಮ್ಸ್ ಹಾಗೂ ಜೆಪ್ಪಿನಮೊಗರುವಿನ ನೇತ್ರಾವತಿ ಸಭಾಂಗಣಗಳನ್ನು ಏಕಕಾಲದಲ್ಲಿ ಉದ್ಘಾಟಿಸಿ ಮಾತನಾಡಿದ ಆಂಧ್ರಪ್ರದೇಶದ ರಾಜ್ಯಪಾಲ ಜ। ಎಸ್. ಅಬ್ದುಲ್ ನಜೀರ್ ಈ ನೂತನ ಸಭಾಂಗಣಗಳು ಕೇವಲ ಮಂಗಳ ಕಾರ್ಯಕ್ರಮಗಳಿಗಷ್ಟೇ ಸೀಮಿತವಾಗದೆ, ಸಮುದಾಯದ ಶಿಕ್ಷಣ, ಸಂಸ್ಕೃತಿ, ಯುವಜನರ ಕೌಶಲ್ಯಾಭಿವೃದ್ಧಿ, ಸಾಮಾಜಿಕ ಸೌಹಾರ್ದತೆಯ ಚಟುವಟಿಕೆಗಳ ಕೇಂದ್ರಗಳಾಗಿ ಬಳಕೆಯಾಗಲಿ ಎಂದು ಆಶಿಸಿದರು.



ಕರಾವಳಿ ತರಂಗಿಣಿ

# ಕಲಾ ತರಂಗಿಣಿ



## 'ಮೃತ್ಯುದೇವತೆ' ನಮ್ಮೂವ ಮಾದೇವ ಹಾಡು

ಈಗಿನ ಸಮಾಜದಲ್ಲಿ ಮಹಿಳೆ ಯಾವರೀತಿ ಟ್ರ್ಯಾಪ್ ಅಗಿ ವಂಚಕರ ಜಾಲದಲ್ಲಿ ಸಿಲುಕಿಕೊಳ್ಳುತ್ತಾಳೆ, ನಂತರ ಅದರಿಂದ ಹೊರಬರಲು ಹೇಗೆ ಪ್ರಯತ್ನಿಸುತ್ತಾಳೆ, ಅಂಥವರಿಗೆ ಶಿಕ್ಷಿಸಲು ಯಾವ ಅವತಾರ ಎತ್ತುತ್ತಾಳೆ ಎಂದು ಮೃತ್ಯುದೇವತೆ ಚಿತ್ರದ ಮೂಲಕ ಹೇಳಲು ಪ್ರಯತ್ನಿಸಿದ್ದಾರೆ ನಿರ್ದೇಶಕ ನವೀನ್ ಮಹಾದೇವ್. ಟ್ರ್ಯಾಪ್‌ಗೆ ಒಳಗಾದ ಮೂವರು ಹೆಣ್ಣು ಮಕ್ಕಳ ಕಥೆಯಿದು. ಮಹಿಳಾ ಪ್ರಧಾನ ಕಥಾಹಂದರ ಇಟ್ಟುಕೊಂಡು ನವೀನ್ ಮಹಾದೇವ್ ಕಥೆ, ಚಿತ್ರಕಥೆ, ಸಂಭಾಷಣೆ, ಸಾಹಿತ್ಯ ಬರೆದು ನಿರ್ದೇಶಿಸಿದ್ದಾರೆ. ಜತೆಗೆ ನಟನೆ ಕೂಡ ಮಾಡಿದ್ದಾರೆ. ಈ ಚಿತ್ರದ ನಮ್ಮೂವ ಮಾದೇವ ಎಂಬ ಹಾಡಿನ ಬಿಡುಗಡೆ ಕಾರ್ಯಕ್ರಮ ನಡೆಯಿತು. ಹಿಮಶ್ರೀ, ನವೀನ್ ಮಹದೇವ್ ಅಭಿನಯದ ಈ ಹಾಡಿಗೆ ನಿರ್ದೇಶಕರೇ ಸಾಹಿತ್ಯ ರಚಿಸಿದ್ದಾರೆ. ಈ ವೇಳೆ ಮಾತನಾಡಿದ ನವೀನ್ ಮಹದೇವ್ ಈ ಹಿಂದೆ ಚಿತ್ರದ ರಿಲೀಸ್ ಡೇಟನ್ನು ಅನೌನ್ಸ್ ಮಾಡಿದ್ದೆವು. ಸಣ್ಣ ಏರುಪೇರಾದ್ದರಿಂದ ತಡವಾಯಿತು. ಮೊದಲ ಹಾಡಿಗೆ ಎಲ್ಲಾ ಕಡೆಯಿಂದ ತುಂಬಾ ಪ್ರಶಂಸೆ ಬಂತು. ಹೆಣ್ಣು, ಹೆಣ್ತನದ ಬಗ್ಗೆ ತುಂಬಾ ಚೆನ್ನಾಗಿ ಹೇಳಿದ್ದೀರ ಎಂದು ಮೆಚ್ಚಿಕೊಂಡರು. ಮೊದಲು ಈ ಹಾಡನ್ನು ಬಳಸಿಕೊಂಡಿರಲಿಲ್ಲ. ಹಿಮಶ್ರೀ ಅವರ ಒತ್ತಾಯದಿಂದ ಮಾಡಬೇಕಾಯಿತು. ಟ್ರೈಲರ್ ತುಂಬಾ ಚೆನ್ನಾಗಿ ಬಂದಿದೆ. ಟ್ರೈಲರ್, ಹಾಡುಗಳನ್ನು ಎಷ್ಟು ಚೆನ್ನಾಗಿ ಪ್ರೆಸೆಂಟ್ ಮಾಡುತ್ತೇವೋ ಅದರ ಮೇಲೆ ಸಿನಿಮಾದ ರಿಜಲ್ಟ್ ಇರುತ್ತದೆ. ಒಂದೊಳ್ಳೆ ಸಿನಿಮಾ ಅಂದರೆ ಜನ ಏನು ಬಯಸುತ್ತಾರೋ ಅದನ್ನು ಟ್ರೈಲರ್ ಮೂಲಕ ಹೇಳಿದ್ದೇನೆ. ಟ್ರೈಲರ್ ಕಟ್ ಮಾಡಲು 30 ದಿನ ತಗೊಂಡಿದ್ದೆ ಎಂದರು. ಸಹನಿರ್ದೇಶಕ ದೇವು ಮಾತನಾಡಿ ಚಿತ್ರದಲ್ಲಿ ಕೋಳಿ ಕೊಯ್ಯುವ ಸೀನ್ ಇದೆ. ಅದಕ್ಕೆ ಸೆನ್ಸಾರ್‌ನವರು ಅನಿಮಲ್ ಬೋರ್ಡ್ ಅನುಮತಿ ತಗೋಬೇಕು ಎಂದರು. ಹಾಗಾಗಿ ಚಿತ್ರ ತಡವಾಗುತ್ತಿದೆ. ಎಂ.ಪಿ. ಫಿಲಂಸ್ ಮುನೀಂದ್ರ ಅವರು ಚಿತ್ರವನ್ನು ರಿಲೀಸ್ ಮಾಡುತ್ತಿದ್ದಾರೆ ಎಂದರು. ನಾಯಕಿ ಸಾರಿಕಾ ರಾವ್ ಮಾತನಾಡಿ ತುಂಬಾ ಇಷ್ಟಪಟ್ಟು ಮಾಡಿರುವ ಸಿನಿಮಾ. ಎಲ್ಲರೂ ಅವರವರ ಪಾತ್ರಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಿದ್ದಾರೆ.ಈ ಸಿನಿಮಾ ಕೇವಲ ಮನೋರಂಜನೆಗಾಗಿ ಅಲ್ಲ, ಬದಲಾವಣೆ ಆಗಬೇಕು. ಜನರಿಗೆ ಪ್ರೇರಣೆಯಾಗುತ್ತದೆ ಎಂದರು



## ಸೂರಜ್-ಶರಣ್ಯಾ-ಪ್ರವೀಣ್ ಹೊಸ ರೊಮ್ಯಾಂಟಿಕ್ ಕ್ರೈಂ-ಥ್ರಿಲ್ಲರ್ ಕಹಾನಿ

'ಜಿ9 ಕಮ್ಯುನಿಕೇಶನ್ ಆಂಡ್ ಮೀಡಿಯಾ' ಸಂಸ್ಥೆಯ ಅಡಿಯಲ್ಲಿ ನಿರ್ಮಾಣವಾಗುತ್ತಿರುವ, ಗುರುರಾಜ ಕುಲಕರ್ಣಿ (ನಾಡಗೌಡ) ನಿರ್ದೇಶನದ 'ಡಿಯರ್ ಹಸ್ಬೆಂಡ್' ಚಿತ್ರದ ತೆರೆ ಹಿಂದಿನ ಕೆಲಸಗಳು ಭರದಿಂದ ನಡೆಯುತ್ತಿದೆ. ಈಗಾಗಲೇ ಸದ್ದಿಲ್ಲದೆ, 'ಡಿಯರ್ ಹಸ್ಬೆಂಡ್' ಚಿತ್ರದ ಮೊದಲ ಹಂತದ ಚಿತ್ರೀಕರಣವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿರುವ ಚಿತ್ರತಂಡ, ಇದೀಗ ಚಿತ್ರದ ಹಾಡುಗಳ ಧ್ವನಿ ಮುದ್ರಣ ಕಾರ್ಯವನ್ನೂ ಕೂಡ ಮಾಡಿ ಮುಗಿಸಿದೆ. ಇನ್ನು 'ಡಿಯ ರ್ ಹಸ್ಬೆಂಡ್' ಚಿತ್ರದ ಕೊನೆಯ ಹಾಡಿಗೆ ಬಾಲಿವುಡ್‌ನ ಖ್ಯಾತ ಗಾಯಕ ನಕಾಶ್ ಧ್ವನಿಯಾಗಿದ್ದಾರೆ. ಇತ್ತೀಚೆಗೆ ಬೆಂಗಳೂರಿನ ಸ್ಟುಡಿಯೋ ಒಂದರಲ್ಲಿ ಈ ಹಾಡಿನ ಧ್ವನಿಮುದ್ರಣ ಕಾರ್ಯ ನಡೆಯಿತು. ವೀರ್ ಸಮರ್ಥ್ ಸಂಗೀತ ಸಂಯೋಜನೆಯಲ್ಲಿ ಮೂಡಿಬಂದಿರುವ 'ಮಾಲಾಶ್ರೀ ಸಿಕ್ಕಳೋ ಮೆಲ್ಲನೆ ನಕ್ಕಳೋ' ಎಂದು ಆರಂಭವಾಗುವ ಟಪೋರಿ ಶೈಲಿಯ ಈ ಹಾಡಿನ ಸಾಲುಗಳಿಗೆ ಪ್ರಮೋದ ಮರವಂತೆ ಸಾಹಿತ್ಯವಿದ್ದು, ಮುಂಬೈನಿಂದ ಬೆಂಗಳೂರಿಗೆ ಬಂದ ಬಾಲಿವುಡ್‌ನ ಖ್ಯಾತ ಗಾಯಕ ನಕಾಶ್ ಈ ಹಾಡಿಗೆ ಧ್ವನಿಯಾಗಿ ಮೆರಗು ತಂದಿದ್ದಾರೆ. 'ಡಿಯರ್ ಹಸ್ಬೆಂಡ್' ಚಿತ್ರದ ಹಾಡುಗಳ ಬಗ್ಗೆ ಮಾತನಾಡಿರುವ ಚಿತ್ರದ ನಿರ್ದೇಶಕ ಗುರುರಾಜ ಕುಲಕರ್ಣಿ (ನಾಡಗೌಡ), 'ಈಗಾಗಲೇ 'ಡಿಯರ್ ಹಸ್ಬೆಂಡ್' ಚಿತ್ರದ ಒಂದಷ್ಟು ಭಾಗದ ಚಿತ್ರೀಕರಣ ಮಾಡಿ ಮುಗಿಸಿದ್ದೇವೆ. ಇದೀಗ ಬಾಕಿಯಿದ್ದ ಸಿನಿಮಾದ ಹಾಡುಗಳ ರೆಕಾರ್ಡಿಂಗ್ ಕೂಡ ಪೂರ್ಣವಾಗಿದೆ. ಗಾಯಕ ನಕಾಶ್ ಅವರು ಸಿನಿಮಾದಲ್ಲಿ ಈ ಹಾಡಿನ ಹಿನ್ನೆಲೆ, ಸಾಹಿತ್ಯದ ಅರ್ಥವನ್ನು ತಿಳಿದುಕೊಂಡು ತುಂಬ ಖುಷಿಯಿಂದ ಈ ಹಾಡನ್ನು ಹಾಡಿದ್ದಾರೆ. ರಾತ್ರಿ ಶುರು ವಾದ ಈ ಹಾಡಿನ ರೆಕಾರ್ಡಿಂಗ್ ಮುಂಜಾನೆವರೆಗೂ ನಡೆಯಿತು. ಈ ಹಾಡನ್ನು ಈ ಸಿನಿಮಾದ ಯುಎಸ್ಪಿ ಎಂದೇ ಹೇಳಬಹುದು' ಎಂದು ವಿವರಣೆ ನೀಡಿದ್ದಾರೆ. 'ಇಲ್ಲಿಯವರೆಗೆ ಸಂಗೀತ ನಿರ್ದೇಶನ ವೀರ್ ಸಮರ್ಥ್ ಮತ್ತು ಗೀತ ಸಾಹಿತಿ ಪ್ರಮೋದ್ ಮರವಂತೆ ಅವರ ಕಾಂಬಿನೇಶನ್‌ನಲ್ಲಿ ಬಂದಿರುವ ಹಾಡು ಒಂದು ಶೈಲಿಯಾಗಿದ್ದರೆ, ಈ ಹಾಡು ಅದೆಲ್ಲದಕ್ಕಿಂತ ವಿಭಿನ್ನವಾದ ಮತ್ತೊಂದು ಶೈಲಿಯಲ್ಲಿದೆ ಎಂದರು.



## 'ರಾಗಿಣಿ ಐಪಿಎಸ್ 2' ಚಿತ್ರಕ್ಕೆ ಚಾಲನೆ

ತಮ್ಮ ಅಭಿನಯದ ಮೂಲಕ ಅಭಿಮಾನಿಗಳ ಮನ ಗೆದ್ದಿರುವ ನಟಿ ರಾಗಿಣಿ ದ್ವಿವೇದಿ ಅವರಿಗೆ ಹುಟ್ಟುಹಬ್ಬದ ಸಂಭ್ರಮ. ಈ ಸಂದರ್ಭದಲ್ಲೇ ನೂತನ ಚಿತ್ರದ ಘೋಷಣೆ ಸಹ ಆಗಿದೆ. ಹನ್ನೆರಡು ವರ್ಷಗಳ ಹಿಂದೆ ರಾಗಿಣಿ ಅವರು ನಾಯಕಿಯಾಗಿ ನಟಿಸಿದ್ದ "ರಾಗಿಣಿ ಐಪಿಎಸ್" ಚಿತ್ರ ಭರ್ಜರಿ ಯಶಸ್ಸು ಕಂಡಿತ್ತು. ಈಗ ಈ ಚಿತ್ರದ ಮುಂದುವರಿದ ಭಾಗ "ರಾಗಿಣಿ ಐಪಿಎಸ್ 2" ಚಿತ್ರ ಸಹ ಆರಂಭವಾಗಲಿದೆ. ನಟಿ ರಾಗಿಣಿ ದ್ವಿವೇದಿ ಹುಟ್ಟುಹಬ್ಬಕ್ಕೆ ಈ ಸಿನಿಮಾ ಘೋಷಣೆಯಾಗಿದೆ. ಖ್ಯಾತ ನಟ ನವರಸ ನಾಯಕ ಜಗ್ಗೇಶ್ ಅವರ ಪುತ್ರರಾದ ಗುರುರಾಜ್ ಹಾಗೂ ಯತಿರಾಜ್ ಈ ಚಿತ್ರವನ್ನು ನಿರ್ದೇಶನ ಮಾಡುತ್ತಿದ್ದಾರೆ. ನಟರಾಗಿ ಜನಪ್ರಿಯರಾಗಿದ್ದ ಗುರುರಾಜ್ ಹಾಗೂ ಯತಿರಾಜ್ ಈ ಸಿನಿಮಾ ಮೂಲಕ ನಿರ್ದೇಶಕರಾಗಿ ಚಿತ್ರರಂಗ ಪ್ರವೇಶಿಸುತ್ತಿದ್ದಾರೆ. ಕೆ.ಮಂಜು ಹಾಗೂ ರಾಗಿಣಿ ವೆಂಚರ್ಸ್ ಜಂಟಿಯಾಗಿ ಈ ಸಿನಿಮಾ ನಿರ್ಮಾಣ ಮಾಡುತ್ತಿದೆ. ರಾಗಿಣಿ ಅವರ ಹುಟ್ಟುಹಬ್ಬದ ದಿನ ಈ ಸಿನಿಮಾದ ಕುರಿತು ಹೆಚ್ಚಿನ ಮಾಹಿತಿ ನೀಡಿದರು. "ರಾಗಿಣಿ ಐಪಿಎಸ್" ಜನಪ್ರಿಯ ಚಿತ್ರ. ರಾಗಿಣಿ ಅವರ ಅಭಿನಯಕ್ಕೆ ಅಭಿಮಾನಿಗಳು ಫಿದಾ ಆಗಿದ್ದರು. ಈಗ ಆ ಚಿತ್ರದ ಮುಂದುವರಿದ ಭಾಗ "ರಾಗಿಣಿ ಐಪಿಎಸ್ 2" ಚಿತ್ರವನ್ನು ಆರಂಭಿಸುತ್ತಿದ್ದೇವೆ. ನಾವಿಬ್ಬರು 2019ರಿಂದಲೂ ನಿರ್ದೇಶನಕ್ಕಾಗಿ ಸಾಕಷ್ಟು ತಯಾರಿ ಮಾಡಿಕೊಂಡಿದ್ದೇವೆ. ನಟನೆಯೇ ಬೇರೆ. ನಿರ್ದೇಶನವೇ ಬೇರೆ. ನಿರ್ದೇಶನಕ್ಕೆ ತಯಾರಿ ಅಗತ್ಯ. ರಾಗಿಣಿ ಅವರು ಈಗಾಗಲೇ ಜನಪ್ರಿಯ ನಟಿ ಹಾಗೂ ಅಪಾರ ಅಭಿಮಾನಿಗಳನ್ನು ಹೊಂದಿರುವ ನಟಿಯೂ ಹೌದು. ಅವರ ಚಿತ್ರ ನಿರ್ದೇಶನ ಮಾಡುವುದು ಸುಲಭವಲ್ಲ ಎಂದರು.



## 'ಲಂಬೋದರ 2.0' ಬಾಲಿವುಡ್ ನಟ ಕುನಾಲ್ ಕಪೂರ್ ಸೇರ್ಪಡೆ

ಖ್ಯಾತ ಬಾಲಿವುಡ್ ನಟ ಕುನಾಲ್ ಕಪೂರ್ ಅವರು ನಿರ್ದೇಶಕ ಸಿಂಪಲ್ ಸುನಿ ಅವರ ಮಹತ್ವಾಕಾಂಕ್ಷಿ ಸೈನ್ಸ್ ಫಿಕ್ಷನ್ ಸಾಮಾಜಿಕ ಥ್ರಿಲ್ಲರ್ ಚಿತ್ರ "ಲಂಬೋದರ 2.0" ತಂಡಕ್ಕೆ ಅಧಿಕೃತವಾಗಿ ಸೇರ್ಪಡೆಯಾಗಿದ್ದಾರೆ. ಈ ಚಿತ್ರದ ಮೂಲಕ ಅನಿಲ್ ಶೆಟ್ಟಿ ನಾಯಕ ನಟನಾಗಿ ಚಿತ್ರರಂಗಕ್ಕೆ ಕಾಲಿಡುತ್ತಿದ್ದು, ಅವರ ಎದುರು ಬಾಲಿವುಡ್ ನಟಿ ಸಾಚಿ ಬಿಂದ್ರಾ ನಾಯಕಿಯಾಗಿ ಕಾಣಿಸಿಕೊಳ್ಳುತ್ತಿದ್ದಾರೆ. ರಂಗ್ ದೇ ಬಸಂತಿ, ಡಾನ್ 2, ವೀರಂ, ಡಿಯರ್ ಜಿಂದಗಿ ಚಿತ್ರದ ಮೂಲಕ ಅಪಾರ ಜನಪ್ರಿಯತೆ ಪಡೆದ ಕುನಾಲ್ ಕಪೂರ್ ಅವರು ಈ ಸಿನಿಮಾದಲ್ಲಿ ಅತ್ಯಂತ ಪ್ರಮುಖ ಪಾತ್ರದಲ್ಲಿ ಅಭಿನಯಿಸುತ್ತಿದ್ದು, ಈ ಚಿತ್ರದ ಮೂಲಕ ಕನ್ನಡ ಚಿತ್ರರಂಗಕ್ಕೂ ಪದಾರ್ಪಣೆ ಮಾಡುತ್ತಿದ್ದಾರೆ. "ಲಂಬೋದರ 2.0" ಇಂದಿನ ಸಾಮಾಜಿಕ ಜಾಲತಾಣಗಳ ಪ್ರಭಾವದಲ್ಲಿ ಬದುಕುತ್ತಿರುವ ಯುವ ಜನಾಂಗದ ಗೊಂದಲಭರಿತ ಜೀವನವನ್ನು ಅನ್ವೇಷಿಸುವ ಕಥೆಯನ್ನು ಹೊಂದಿದೆ. ಕೃತಕ ಬುದ್ಧಿಮತ್ತೆ (AI) ಆಳುವ ಜಗತ್ತಿನಲ್ಲಿ ಸಂತೋಷ, ಸಾಮಾಜಿಕ ಮಾನ್ಯತೆ, ಏಕಾಂತ, ಡಿಜಿಟಲ್ ಅಡಿಕ್ಷನ್ ಹಾಗೂ ನಿಯಂತ್ರಣದಂತಹ ಸಮಕಾಲೀನ ವಿಚಾರಗಳನ್ನು ಚಿತ್ರವು ಒಳಗೊಂಡಿದೆ. ಚಿತ್ರದ ಅಂತಿಮ ಹಂತದ ಚಿತ್ರೀಕರಣ ಪ್ರಸ್ತುತ ನಡೆಯುತ್ತಿದ್ದು, ಸೆಪ್ಟೆಂಬರ್ ತಿಂಗಳಲ್ಲಿ ಭರ್ಜರಿ ಥಿಯೇಟ್ರಿಕಲ್ ಬಿಡುಗಡೆಯನ್ನು ಗುರಿಯಾಗಿಸಿಕೊಂಡಿದೆ. ಜಾಗತಿಕ ಮಟ್ಟದಲ್ಲಿ ಎಲ್ಲರಿಗೂ ಸಂಪರ್ಕಿಸಬಹುದಾದ ಕಥಾವಸ್ತು, ಭವಿಷ್ಯಮಯ ನಿರೂಪಣೆ ಹಾಗೂ Gen Z ಪ್ರೇಕ್ಷಕರಿಗೆ ಹೊಂದುವ ವಿಷಯದ ಕಾರಣದಿಂದ ಚಿತ್ರವನ್ನು ಹಲವು ಭಾಷೆಗಳಲ್ಲಿ ವಿಶ್ವದಾದ್ಯಂತ ಬಿಡುಗಡೆ ಮಾಡುವ ಯೋಜನೆ ಚಿತ್ರತಂಡಕ್ಕಿದೆ. ಚಿತ್ರಕ್ಕೆ ಸಂತೋಷ್ ರೈ ಪತಾಜೆ ಛಾಯಾಗ್ರಾಹಕರಾಗಿದ್ದು, ವೀರ ಸಮರ್ಥ ಸಂಗೀತ ನಿರ್ದೇಶಕರಾಗಿದ್ದು ಮತ್ತು ನಿದಿಶಾ ಸುವರ್ಣ ಎಕ್ಸಿಕ್ಯೂಟಿವ್ ಪ್ರೊಡ್ಯೂಸರ್ ಆಗಿದ್ದಾರೆ.



## 'ದೊಡ್ಮನ್ಸ' ಸಿನಿಮಾದ ಡ್ಯುಯೆಟ್ ಸಾಂಗ್ ರಿಲೀಸ್



ವೇದಿಕ್ ಕಾಸ್ಮೋಸ್ ಬ್ಯಾನರ್ ಅಡಿಯಲ್ಲಿ, ಶರತ್ ಕೃಷ್ಣ ನಿರ್ದೇಶನದಲ್ಲಿ ಶರತ್ ಕೃಷ್ಣ ಮತ್ತು ರೇಷ್ಮಾ, ಶಿಲ್ಪಾ ಮುಖ್ಯ ಪಾತ್ರದಲ್ಲಿ ನಟಿಸಿರುವ 'ದೊಡ್ಮನ್ಸ' ಚಿತ್ರದ ಪ್ರಣಯ ಗೀತೆ ರಿಲೀಸ್ ಆಗಿದೆ. ಬೀಚ್‌ನಂತೆ ಕಾಣುವ ಸಾಲ್ಟ್ ಇರುವ ಜಾಗದಲ್ಲಿ ನಡುವಲ್ಲಿ, ಆ ನೀರಿನ ಸದ್ದಲ್ಲಿ, ಪ್ರೇಮಿಗಳಿಬ್ಬರ ಗೀತೆ ಮನಸ್ಸಿಗೆ ಮುದ ನೀಡುವಂತೆ ಇದೆ. ಶರತ್ ಹಾಗೂ ರೇಷ್ಮಾ ಕೆಮಿಸ್ಟ್ರಿ ಅದ್ಭುತವಾಗಿ ಕಾಣಿಸಿದೆ. ಗುಜರಾತ್‌ನಲ್ಲಿ ಶೂಟ್ ಮಾಡಲಾಗಿದೆ. ಈ ಸಂಬಂಧ ನಿರ್ದೇಶಕ ಶರತ್‌ಕೃಷ್ಣ ಮಾತನ್ನಾಡಿ, ದೊಡ್ಮನ್ಸ ಎಂಬ ಟೈಟಲ್ ನೋಡೋಕೆ ಖುಷಿಯಾಗುತ್ತೆ. ವಿಷ್ಣು ಸರ್ ಗೆ ಇದ್ದ ಟೈಟಲ್ ನಮಗೆ ಸಿಕ್ಕಿದ್ದು ಬಹಳ ಖುಷಿ ಆಯ್ತು. ನಾರಾಯಣ್ ಅವರೇ ನಮಗೆ ಅಪ್ರಿಷಿಯೇಷನ್ ಮಾಡಿದ್ದರು. ಅವರು ಹೇಳಿದ್ದಾಗಲೇ ಗೊತ್ತಾಗಿದ್ದು. ದುಡ್ಡಿದ್ದೋರಲ್ಲ ಗುರು ದೊಡ್ಡ ಮನ್ಸ ದೊಡ್ಡ ಮನಸ್ಸಿದ್ದೋನೆ ದೊಡ್ಮನ್ಸ ಅನ್ನೋದನ್ನ ಹೇಳುವ ರೀತಿಯ ಕಥೆ ಇದು. ಎಲ್ಲಾ ಸೇರಿದಾಗ ಒಂದು ದೊಡ್ಮನ್ಸ ಸಿನಿಮಾ ಆಗುತ್ತೆ. ಆಟೋ ಡ್ರೈವರ್‌ಗಳಿಗೆ ಸ್ಪೆಷಲ್ ಶೋಗಳನ್ನ ಎಂಟು ಜಿಲ್ಲೆಗಳಲ್ಲಿ ಕೊಡ್ತಾ ಇದ್ದೇವೆ ಎಂದರು.

## 'ಗುರುತ್ವಾಕರ್ಷಣೆ' ಸದ್ಯದಲ್ಲೇ ತೆರೆಗೆ

ಮದರ್ ಪ್ರಾಮೀಸ್ ಟಾಕೀಸ್ ಬ್ಯಾನರ್ ಅಡಿಯಲ್ಲಿ ಮಹೇಂದರ್ ಸಿ ಗುಂಡೇಗಾಲ ಕಥೆ, ಚಿತ್ರಕಥೆ, ಸಂಭಾಷಣೆ ಬರೆದು ಮೊದಲ ಬಾರಿಗೆ ನಿರ್ದೇಶನ ಮಾಡುವುದರ ಜೊತೆಗೆ ನಿರ್ಮಾಣವನ್ನೂ ಮಾಡಿರುವ ಚಿತ್ರ 'ಗುರುತ್ವಾಕರ್ಷಣೆ'. ಇದಕ್ಕೆ ಸಹ ನಿರ್ಮಾಪಕರಾಗಿ ದಿಲೀಪ್ ಸಿದ್ದಪ್ಪಾಜಿ ಕೊಳ್ಳೇಗಾಲ ಸಾಥ್ ನೀಡಿದ್ದಾರೆ. ಈವರೆಗೂ ಕೆಲವು ಕಿರುಚಿತ್ರಗಳನ್ನು ನಿರ್ದೇಶಿಸಿರುವ ಮಹೇಂದರ್ ಸಿ ಗುಂಡೇಗಾಲ ಅವರಿಗೆ ಇದು ಚೊಚ್ಚಲ ನಿರ್ದೇಶನದ ಚಿತ್ರ. 'ಗುರುತ್ವಾಕರ್ಷಣೆ' ಶೀರ್ಷಿಕೆ ಕೇಳಿದ ತಕ್ಷಣ ಎಲ್ಲರಿಗೂ ವೈಜ್ಞಾನಿಕ ಚಿತ್ರ ಅನಿಸುವುದು ಸಹಜ. ಆದರೆ ಇದು ವೈಜ್ಞಾನಿಕ ಚಿತ್ರವಲ್ಲ.'ಗುರುತ್ವಾಕರ್ಷಣೆ' ಯನ್ನು ಜೀವನದಲ್ಲಿ ಅಳವಡಿಸಿಕೊಂಡಾಗ ಏನಾಗುತ್ತದೆ ? ಎಂಬುದನ್ನು ಈ ಚಿತ್ರದಲ್ಲಿ ತೋರಿಸಿದ್ದೇವೆ. ಇದು ಕೊಳ್ಳೇಗಾಲ ಮತ್ತು ಚಾಮರಾಜನಗರದಲ್ಲಿ ನಡೆಯುವ ಕಥೆ. ಚಿತ್ರೀಕರಣ ಸಹ ಅಲ್ಲೇ ಆಗಿದೆ. ಈಗಾಗಲೇ ನೀತು ನಿನಾದ್ ಸಂಗೀತ ನೀಡಿರುವ ಎರಡು ಹಾಡುಗಳು ಹಾಗೂ ಟೀಸರ್ A2ಮ್ಯೂಸಿಕ್ ಮೂಲಕ ಬಿಡುಗಡೆಯಾಗಿದ್ದು, ಅಧಿಕ ಸಂಖ್ಯೆಯಲ್ಲಿ ವೀಕ್ಷಣೆ ಸಹ ಆಗುತ್ತಿದೆ.



## 'ಹಲ್ಕಾ ಡಾನ್' ಅಂಗಳಕ್ಕೆ ನಟ ಜಾನ್ ವಿಜಯ್ ಎಂಟ್ರಿ

'ಟಗರು', 'ಸಲಗ' ಹಾಗೂ 'ಯುಐ' ಚಿತ್ರಗಳನ್ನು ನಿರ್ಮಿಸಿರುವ ಕೆ.ಪಿ.ಶ್ರೀಕಾಂತ್ 'ಹಲ್ಕಾ ಡಾನ್' ಎಂಬ ಮತ್ತೊಂದು ಚಿತ್ರ ನಿರ್ಮಾಣ ಮಾಡುತ್ತಿರುವುದು ಗೊತ್ತಿರುವ ಸಂಗತಿ. ವೀನಸ್ ಎಂಟರ್‌ಟೈನರ್ ಬ್ಯಾನರ್ ಅಡಿಯಲ್ಲಿ ಮೂಡಿಬರುತ್ತಿರುವ ನಾಲ್ಕನೇ ಚಿತ್ರ ಇದಾಗಿದೆ. ಈ ಸಿನಿಮಾದಲ್ಲಿ ಪ್ರಮೋದ್ ನಾಯಕನಾಗಿ, ಅಮೃತಾ ಅಯ್ಯಂಗಾರ್ ನಾಯಕಿಯಾಗಿ ನಟಿಸುತ್ತಿದ್ದಾರೆ. ಇದೀಗ ಹಲ್ಕಾ ಡಾನ್ ಅಂಗಳಕ್ಕೆ ಬಹುಭಾಷಾ ನಟ ಜಾನ್ ವಿಜಯ್ ಎಂಟ್ರಿ ಕೊಟ್ಟಿದ್ದಾರೆ. ತಮಿಳು, ತೆಲುಗು ಹಾಗೂ ಹಿಂದಿಯ ಸಾಕಷ್ಟು ಸಿನಿಮಾಗಳಲ್ಲಿ ಅಭಿನಯಿಸಿರುವ ಜಾನ್ ವಿಜಯ್ ಹಲ್ಕಾ ಡಾನ್ ಚಿತ್ರದಲ್ಲಿ ನಟಿಸುತ್ತಿದ್ದಾರೆ. ಅಂದಹಾಗೇ ಜಾನ್ ಈ ಹಿಂದಿ ಪೃಥ್ವಿ ಹಾಗೂ ಗಜಕೇಸರಿ ಸಿನಿಮಾಗಳಲ್ಲಿ ನಟಿಸಿದ್ದರು. ಇದೀಗ ಬಹಳ ವರ್ಷಗಳ ನಂತರ ಮತ್ತೆ ಕನ್ನಡ ಚಿತ್ರರಂಗದತ್ತ ಮುಖ ಮಾಡಿದ್ದಾರೆ. ಸ್ಪೆಷಲ್ ಪೋಸ್ಟರ್ ಮೂಲಕ ಜಾನ್ ವಿಜಯ್ ಅವರನ್ನು ಚಿತ್ರತಂಡ ಸ್ವಾಗತಿಸಿದೆ. ಕೂಲಿಂಗ್ ಗ್ಲಾಸ್ ಹಾಕಿ, ಸಿಗರೇಟ್ ಸಿದುತ್ತಾ ರಗಡ್ ಆಗಿ ಜಾನ್ ಕಾಣಿಸಿಕೊಂಡಿದ್ದಾರೆ. ಚಿತ್ರಕ್ಕೆ ಚಲ ಈ ಸಿನಿಮಾಗೆ ಆಕ್ಷನ್ ಕಟ್ ಹೇಳುತ್ತಿದ್ದಾರೆ. ಸಿನಿಮಾಗೆ 'ಸಾಯಿ ಕುಮಾರ್ ಫ್ಯಾನ್' ಎಂಬ ಅಡಿಬರಹವಿದ್ದು, ಸಾಯಿಕುಮಾರ್ ಅತಿಥಿ ಪಾತ್ರದಲ್ಲಿ ಕಾಣಿಸಿಕೊಳ್ಳಲಿದ್ದಾರೆ.



## ವಿಜಯ ರಾಘವೇಂದ್ರ ಈಗ 'ಮಹಾನ್'

ಆಕಾಶ್ ಪಿಕ್ಚರ್ಸ್ ಲಾಂಛನದಲ್ಲಿ ಪ್ರಕಾಶ್ ಬುದ್ದೂರು ನಿರ್ಮಿಸುತ್ತಿರುವ, ಕನ್ನಡದಲ್ಲಿ ಸಾಕಷ್ಟು ಸದಭಿರುಚಿಯ ಚಿತ್ರಗಳನ್ನು ನಿರ್ದೇಶಿಸಿರುವ ಪಿ.ಸಿ.ಶೇಖರ್ ನಿರ್ದೇಶಿಸುತ್ತಿರುವ 'ಮಹಾನ್' ಚಿತ್ರದ ನಾಯಕನಾಗಿ ಪ್ರತಿಭಾವಂತ ನಟ ವಿಜಯರಾಘವೇಂದ್ರ ನಟಿಸಿದ್ದಾರೆ. ರೈತರ ಕುರಿತಾದ ಕಥಾಹಂದರ ಹೊಂದಿರುವ ಈ ಚಿತ್ರದಲ್ಲಿ ವಿಜಯ ರಾಘವೇಂದ್ರ ರೈತನ ಪಾತ್ರದಲ್ಲೇ ಕಾಣಿಸಿಕೊಂಡಿದ್ದಾರೆ. ನಟ ವಿಜಯ ರಾಘವೇಂದ್ರ ಅವರಿಗೆ ಹುಟ್ಟುಹಬ್ಬದ ಸಂಭ್ರಮ. ಈ ಸಂದರ್ಭದಲ್ಲಿ 'ಮಹಾನ್' ಚಿತ್ರದ ವಿಜಯರಾಘವೇಂದ್ರ ಅವರ ವಿಶೇಷ ಲುಕ್ ಬಿಡುಗಡೆ ಮಾಡುವ ಮೂಲಕ ಚಿತ್ರತಂಡ ಹುಟ್ಟುಹಬ್ಬದ ಶುಭಾಶಯ ತಿಳಿಸಿದೆ. ಚಿತ್ರವನ್ನು ಯಾವುದೇ ಕೊರತೆ ಬಾರದ ಹಾಗೆ ಪ್ರಕಾಶ್ ಬುದ್ದೂರು ನಿರ್ಮಾಣ ಮಾಡುತ್ತಿದ್ದಾರೆ. ಈವರೆಗೂ ಹತ್ತು ಸದಭಿರುಚಿಯ ಚಿತ್ರಗಳನ್ನು ನಿರ್ದೇಶಿಸಿ ಜನಪ್ರಿಯರಾಗಿರುವ ಪಿ.ಸಿ.ಶೇಖರ್ ನಿರ್ದೇಶನದ ಹನ್ನೊಂದನೆ ಚಿತ್ರವಿದು.



## ಮದ್ದಾನೆ ಟ್ರೈಲರ್ ಬಿಡುಗಡೆ

ಈ ಹಿಂದೆ ಎಮ್ಮೆ ತಿಮ್ಮ, ಮೊದಲಮಳೆ ಚಿತ್ರಗಳನ್ನು ನಿರ್ದೇಶಿಸಿದ್ದ ಕೆ.ರಾಜ್ ಶರಣ್ ಅವರ ನಿರ್ದೇಶನದ ಮೂರನೇ ಚಿತ್ರ ಮದ್ದಾನೆ. ಎಲ್.ಎಂ. ಫಿಲಂಸ್ ಮೂಲಕ ಲತಾ ಮೂರ್ತಿ ಅವರ ನಿರ್ಮಾಣದ ಈ ಚಿತ್ರದಲ್ಲಿ ಆರ್ಯ ನಾಯಕನಾಗಿ ನಟಿಸಿ ದ್ದಾರೆ. ಸಹ-ನಿರ್ಮಾಪಕರಾಗಿ ಡಾ. ಮಾರುತಿ ಎನ್. ಈ. ಕೈ ಜೋಡಿಸಿದ್ದಾರೆ. ಬಿಡುಗಡೆಗೆ ಸಿದ್ದವಾಗಿರುವ ಈ ಚಿತ್ರದ ಟ್ರೈಲರ್ ಬಿಡುಗಡೆ ಕಾರ್ಯಕ್ರಮ ನಡೆಯಿತು. ಈ ಸಂದರ್ಭದಲ್ಲಿ ಮಾತನಾಡಿದ ನಿರ್ದೇಶಕ ರಾಜ್‌ಶರಣ್, ಮದ್ದಾನೆ ಎಂದರೆ ಆ್ಯಂಗ್ರಿ ಎಲಿಫೆಂಟ್, ಅದರ ಬಳಿ ಯಾರೂ ಹೋಗಲು ಸಾಧ್ಯವಿಲ್ಲ. ಆನೆ ರೀತಿಯ ವ್ಯಕ್ತಿ ಹೇಗೆ ಮದ್ದಾನೆಯಾಗಿ ಪರಿವರ್ತನೆಯಾಗ್ತಾನೆ? ಎಂದು ಈ ಚಿತ್ರದಲ್ಲಿ ಹೇಳಿದ್ದೇವೆ. ನಾಯಕನಿಗೆ ಆನೆ, ಮದ್ದಾನೆ ಹೀಗೆ 2 ಶೇಡ್ಸ್ ಪಾತ್ರವಿದೆ. ಮೈಸೂರು, ಮಂಡ್ಯ, ಬೆಂಗಳೂರು, ಚಿತ್ರದುರ್ಗ ಹಾಗೂ ಉತ್ತರ ಕರ್ನಾಟಕದ ಸುತ್ತಮುತ್ತ ಸುಮಾರು 30 ದಿನಗಳ ಕಾಲ ಚಿತ್ರೀಕರಣ ನಡೆಸಿದ್ದೇವೆ ಎಂದು ಹೇಳಿದರು.



## 'NH 66' ಚಿತ್ರದ ಚಿತ್ರೀಕರಣ ಪೂರ್ಣ

ರಾಯರ ದಯೆಯಿಂದ 'NH66' ಚಿತ್ರದ ಚಿತ್ರೀಕರಣ ಯಶಸ್ವಿಯಾಗಿ ಪೂರ್ಣಗೊಂಡಿದೆ. ಮಂಗಳೂರು ಮತ್ತು ಮುಂಬೈ ನಡುವಿನ ಅನೇಕ ಸ್ಥಳಗಳಲ್ಲಿ ವ್ಯಾಪಿಸಿರುವ ವ್ಯಾಪಕ ಶೂಟಿಂಗ್ ಶೆಡ್ಯೂಲ್ ನಂತರ ಇಡೀ ಪ್ರಧಾನ ಛಾಯಾಗ್ರಹಣವು ಈಗ ಮುಕ್ತಾಯಗೊಂಡಿದೆ. ಕಳೆದ ತಿಂಗಳು ರಾಯರ ಸನ್ನಿಧಿಯಲ್ಲಿ ಈ ಚಿತ್ರಕ್ಕೆ ಚಾಲನೆ ದೊರಕಿತ್ತು. ಈ ಕಥೆಯನ್ನು ಜೀವಂತಗೊಳಿಸಲು ಅವಿಶ್ರಾಂತವಾಗಿ ಶ್ರಮಿಸಿದ ಪ್ರತಿಭಾನ್ವಿತ ಪಾತ್ರವರ್ಗ ಪ್ರಮೋದ್ ಶೆಟ್ಟಿ, ರಾಜೇಶ್ ನಟರಂಗ, ಶ್ರುತಿ ಹರಿಹರನ್ ಮತ್ತು ತಂಡವನ್ನು ಈ ಚಿತ್ರವು ಒಟ್ಟುಗೂಡಿಸುತ್ತದೆ. ನಿರ್ದೇಶಕ ಮತ್ತು ನಿರ್ಮಾಪಕ ಮಂಜುನಾಥ ಟಿ.ಆರ್. ನಾಯಕತ್ವದಲ್ಲಿ ಈ ಚಿತ್ರವು ಪ್ರೇಕ್ಷಕರಿಗೆ ಆಕರ್ಷಕವಾದ ಸಿನಿಮೀಯ ರೋಡ್ ಥ್ರಿಲ್ಲರ್ ಕಥಾ ಅನುಭವವನ್ನು ನೀಡುವ ಭರವಸೆ ನೀಡುತ್ತದೆ ಎಂದು ಹೇಳುತ್ತಾರೆ. 'ಈ ಪ್ರಧಾನ ಛಾಯಾಗ್ರಹಣವು ಉತ್ಸಾಹ, ಸಮರ್ಪಣೆ ಮತ್ತು ಒಳಗೊಂಡಿರುವ ಪ್ರತಿಯೊಬ್ಬರ ಕಠಿಣ ಪರಿಶ್ರಮದಿಂದ ತುಂಬಿದ ಅದ್ಭುತ ಪ್ರಯಾಣವಾಗಿದೆ.



# ಶ್ರೀ ಕ್ಷೇತ್ರ ಧರ್ಮಸ್ಥಳದ 'ಸಿರಿ' ಗ್ರಾಮೋದ್ಯೋಗ ಸಂಸ್ಥೆ: ಗ್ರಾಮೀಣ ಮಹಿಳೆಯರ ಆರ್ಥಿಕ ಸಬಲೀಕರಣಕ್ಕೆ ಭದ್ರ ಬುನಾದಿ..



ಮಹಾತ್ಮ ಗಾಂಧೀಜಿಯವರ 'ಗ್ರಾಮ ಸ್ವರಾಜ್ಯ'ದ ಕನಸನ್ನು ಸಾಕಾರಗೊಳಿಸುವ ನಿಟ್ಟಿನಲ್ಲಿ, ಗ್ರಾಮೀಣ ಮಹಿಳೆಯರ ಆರ್ಥಿಕ ಸ್ವಾವಲಂಬನೆಗೆ ದಾರಿ ದೀಪವಾಗಿರುವ ಸಂಸ್ಥೆಯೆಂದರೆ ಅದು ಶ್ರೀ ಧರ್ಮಸ್ಥಳ ಸಿರಿ ಗ್ರಾಮೋದ್ಯೋಗ ಸಂಸ್ಥೆ. ಪೂಜ್ಯ ಡಾ. ಡಿ. ವೀರೇಂದ್ರ ಹೆಗ್ಗಡೆಯವರು ಮತ್ತು ಮಾತೃಶ್ರೀ ಹೇಮಾವತಿ ಹೆಗ್ಗಡೆಯವರ ದೂರದೃಷ್ಟಿಯ ಫಲವಾಗಿ 2004ರಲ್ಲಿ ಬೆಳ್ತಂಗಡಿಯಲ್ಲಿ ಪ್ರಾರಂಭವಾದ ಈ ಸಂಸ್ಥೆ, ಇಂದು ಸಾವಿರಾರು ಗ್ರಾಮೀಣ ಮಹಿಳೆಯರ ಬದುಕಿನಲ್ಲಿ ಹೊಸ ಬೆಳಕನ್ನು ಚೆಲ್ಲಿದೆ.

### ಮಹಿಳಾ ಸಬಲೀಕರಣವೇ ಮುಖ್ಯ ಉದ್ದೇಶ:

ಸಿರಿ ಸಂಸ್ಥೆಯು ಕೇವಲ ಲಾಭದಾಯಕ ಉದ್ದೇಶದಿಂದ ಸ್ಥಾಪನೆಯಾದ ಸಂಸ್ಥೆಯಲ್ಲ. ಆರ್ಥಿಕವಾಗಿ ಹಿಂದುಳಿದ, ಶೋಷಿತ ಸಮುದಾಯಗಳ ಮತ್ತು ಅವಕಾಶ ವಂಚಿತ ಮಹಿಳೆಯರಿಗೆ ಗೌರವಯುತ ಜೀವನ ಮತ್ತು ಸ್ವಾವಲಂಬನೆಯನ್ನು ಒದಗಿಸುವುದೇ ಇದರ ಮುಖ್ಯ ಧ್ಯೇಯ. ಯಾವುದೇ ವಿಶೇಷ ಪರಿಣಿತಿ ಇಲ್ಲದಿದ್ದರೂ, ಗ್ರಾಮೀಣ ಮಹಿಳೆಯರಿಗೆ ಇಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿ ನೀಡಿ, ಗುಣಮಟ್ಟದ ಉತ್ಪನ್ನಗಳನ್ನು ತಯಾರಿಸುವಲ್ಲಿ ಸಮರ್ಥರನ್ನಾಗಿ ಮಾಡಲಾಗುತ್ತಿದೆ. ಇದು ಜಿಲ್ಲೆಯ ಮತ್ತು ಇತರ ಜಿಲ್ಲೆಗಳ 5000ಕ್ಕೂ ಅಧಿಕ ಬಡ ಕುಟುಂಬಗಳಿಗೆ ಆಸರೆಯಾಗಿದೆ.

### ವ್ಯಾಪಕ ವಿಸ್ತರಣೆ ಮತ್ತು ಆಧುನಿಕ ತಂತ್ರಜ್ಞಾನ :

ಪ್ರಸ್ತುತ 'ಸಿರಿ'ಯು ಕೇವಲ ಬೆಳ್ತಂಗಡಿಗೆ ಸೀಮಿತವಾಗದೆ, ರಾಜ್ಯದ ವಿವಿಧ ಭಾಗಗಳಲ್ಲಿ ತನ್ನ ಉತ್ಪಾದನಾ ಘಟಕಗಳನ್ನು ಹೊಂದಿದೆ. 71 ಕೋಟಿ ರೂ. ವೆಚ್ಚದಲ್ಲಿ ಒಂದೂವರೆ ಲಕ್ಷ ಚದರ ಅಡಿ ವಿಸ್ತೀರ್ಣದಲ್ಲಿ ನಿರ್ಮಾಣಗೊಂಡ 'ಮಾತೃಶ್ರೀ ಇಂಡಸ್ಟ್ರಿಯಲ್ ಪಾರ್ಕ್' ಇದಕ್ಕೆ ಸಾಕ್ಷಿಯಾಗಿದೆ. ಅತ್ಯಾಧುನಿಕ ಯಂತ್ರೋಪಕರಣಗಳು, ಆಟೋಮ್ಯಾಟಿಕ್ ಪ್ಯಾಕಿಂಗ್ ವ್ಯವಸ್ಥೆ, ಗುಣಮಟ್ಟ ನಿಯಂತ್ರಣ ಪ್ರಯೋಗಾಲಯ (Quality Control Lab) ಮತ್ತು ಸುಸಜ್ಜಿತ ಆಹಾರ ಸಂಸ್ಕರಣಾ ಘಟಕಗಳು ಇಲ್ಲಿವೆ. ಅರಿಶಿಣ, ಮೆಣಸಿನಕಾಯಿ, ವಿವಿಧ ರೀತಿಯ ಮಸಾಲೆ ಪದಾರ್ಥಗಳು, ಉಪ್ಪಿನಕಾಯಿ, ಕೋಕಂ ಜ್ಯೂಸ್, ಹಿಟ್ಟುಗಳು, ಶೇಂಗಾ ಎಣ್ಣೆ, ಅಗರಬತ್ತಿ ಮತ್ತು ಸಿದ್ಧ ಉಡುಪುಗಳು ಸೇರಿದಂತೆ ನೂರಾರು ಬಗೆಯ ಗೃಹೋಪಯೋಗಿ ಉತ್ಪನ್ನಗಳು ಇಲ್ಲಿ 'ಸಿರಿ' ಬ್ರ್ಯಾಂಡ್ ಹೆಸರಿನಲ್ಲಿ ತಯಾರಾಗುತ್ತಿವೆ.




### ಮಹಿಳೆಯರ ಸಮಗ್ರ ಕಲ್ಯಾಣ ಸೌಲಭ್ಯಗಳು :

ಇಲ್ಲಿ ಕೆಲಸ ಮಾಡುವ ಮಹಿಳೆಯರಿಗೆ ಉಚಿತ ಬಸ್ ಸೌಲಭ್ಯ, ಸುಸಜ್ಜಿತ ವಸತಿ ಗೃಹ (Hostel), ಪೌಷ್ಟಿಕ ಆಹಾರ ವ್ಯವಸ್ಥೆ ಮತ್ತು ಅವರ ಮಕ್ಕಳಿಗಾಗಿ ಶಿಶುವಿಹಾರದಂತಹ ಸೌಲಭ್ಯಗಳನ್ನು ಒದಗಿಸಲಾಗಿದೆ. ಇದು ಮಹಿಳೆಯರ ಉದ್ಯೋಗದ ಜೊತೆಗೆ ಅವರ ಕೌಟುಂಬಿಕ ನೆಮ್ಮದಿಯನ್ನೂ ಖಾತ್ರಿಪಡಿಸುತ್ತದೆ. ಜೊತೆಗೆ, ಸಂಸ್ಥೆಯ ಆವರಣದಲ್ಲಿ ಎ.ಟಿ.ಎಂ ಸೌಲಭ್ಯವನ್ನೂ ಕಲ್ಪಿಸಲಾಗಿದೆ, ಇದು ಗ್ರಾಹಕರಿಗೂ ಅನುಕೂಲವಾಗಿದೆ.

### ಆರೋಗ್ಯ ಮತ್ತು ಪೌಷ್ಟಿಕತೆಯತ್ತ ಒಲವು :

ಆಧುನಿಕ ಜಗತ್ತಿನ ಆರೋಗ್ಯದ ಕಳಕಳಿಯನ್ನು ಗಮನದಲ್ಲಿಟ್ಟುಕೊಂಡು, 'ಸಿರಿ' ಸಂಸ್ಥೆಯು ಸಿರಿಧಾನ್ಯ (Millets) ಆಧಾರಿತ ಉತ್ಪನ್ನಗಳಿಗೆ ವಿಶೇಷ ಒತ್ತು ನೀಡಿದೆ. ಧಾರವಾಡದಲ್ಲಿ ಸ್ಥಾಪಿಸಲಾದ ಸುಸಜ್ಜಿತ ಸಿರಿಧಾನ್ಯ ಸಂಸ್ಕರಣಾ ಘಟಕದ ಮೂಲಕ ರಾಗಿ, ನವಣೆ, ಸಾಮೆ, ಬಾರ್ಲಿ ಸೇರಿದಂತೆ ವಿವಿಧ ಸಿರಿಧಾನ್ಯಗಳನ್ನು ಮಾರುಕಟ್ಟೆಗೆ ಪರಿಚಯಿಸಲಾಗಿದೆ. ಇವು ಕೇವಲ ಉತ್ಪನ್ನಗಳಲ್ಲ, ಬದಲಾಗಿ ಆರೋಗ್ಯಕರ ಜೀವನ ಶೈಲಿಗೆ ಪೂರಕವಾದ ಪೌಷ್ಟಿಕ ಆಹಾರಗಳಾಗಿವೆ.

### ಪರಿಸರ ಕಾಳಜಿ ಮತ್ತು ಭವಿಷ್ಯದ ದಾರಿ :

ಸಂಸ್ಥೆಯು ಪರಿಸರ ಸಂರಕ್ಷಣೆಯಲ್ಲೂ ಮುಂಚೂಣಿಯಲ್ಲಿದೆ. ಕಟ್ಟಡಗಳ ಮೇಲ್ಛಾವಣಿಯಲ್ಲಿ ಸೌರಶಕ್ತಿ ಫಲಕಗಳನ್ನು ಅಳವಡಿಸುವ ಮೂಲಕ ಇಂಧನ ಸ್ವಾವಲಂಬನೆಯನ್ನು ಸಾಧಿಸಿದೆ. ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾದ ಶ್ರೀ ಕೆ. ಎನ್. ಜನಾರ್ದನ ಅವರ ನೇತೃತ್ವದಲ್ಲಿ, ಸುಮಾರು 21 ಜಿಲ್ಲೆಗಳಲ್ಲಿ 200ಕ್ಕೂ ಅಧಿಕ ವಿತರಕರು ಮತ್ತು 10ಕ್ಕೂ ಹೆಚ್ಚು ಸೇಲ್ ವೆಹಿಕಲ್‌ಗಳ ಮೂಲಕ ಉತ್ಪನ್ನಗಳು ಗ್ರಾಹಕರಿಗೆ ತಲುಪುತ್ತಿವೆ. ಮುಂದಿನ ದಿನಗಳಲ್ಲಿ ಎಸ್.ಕೆ.ಡಿ.ಆರ್.ಡಿ.ಪಿ (SKDRDP) ಸಹಯೋಗದೊಂದಿಗೆ ಈ ಜಾಲವನ್ನು ಮತ್ತಷ್ಟು ವಿಸ್ತರಿಸಿ, ಗ್ರಾಮೀಣ ಭಾಗದ ಪ್ರತಿ ಮನೆಗೂ ಸಿರಿ ಉತ್ಪನ್ನಗಳನ್ನು ತಲುಪಿಸುವ ಮತ್ತು ಹೆಚ್ಚಿನ ಉದ್ಯೋಗ ಸೃಷ್ಟಿಸುವ ಯೋಜನೆಗಳನ್ನು ಸಂಸ್ಥೆ ಹಮ್ಮಿಕೊಂಡಿದೆ.

### 'ಸಿರಿ' ಗ್ರಾಮೋದ್ಯೋಗ ಸಂಸ್ಥೆ ಗ್ರಾಮೀಣ ಅಭಿವೃದ್ಧಿಗೆ ಕೊಡುಗೆ

'ಸಿರಿ' ಗ್ರಾಮೋದ್ಯೋಗ ಸಂಸ್ಥೆಯ ಇನ್ನೊಂದು ಪ್ರಮುಖ ಆಯಾಮವೆಂದರೆ ಗ್ರಾಮೀಣ ಉತ್ಪನ್ನಗಳಿಗೆ ಮಾರುಕಟ್ಟೆ ಸೃಷ್ಟಿಸುವ



ಅದರ ವಿಶೇಷ ಕಾರ್ಯಪದ್ಧತಿ. ಗ್ರಾಮಗಳಲ್ಲಿ ತಯಾರಾಗುವ ಸಾಂಪ್ರದಾಯಿಕ ಮತ್ತು ಗೃಹೋತ್ಪನ್ನಗಳಿಗೆ ಸರಿಯಾದ ಬೆಲೆ ಸಿಗದೇ ಇರುವ ಸಮಸ್ಯೆಯನ್ನು ಪರಿಹರಿಸಲು ಸಂಸ್ಥೆಯು ಮಧ್ಯವರ್ತಿಗಳಿಲ್ಲದೆ ನೇರವಾಗಿ ಉತ್ಪನ್ನಗಳನ್ನು ಸಂಗ್ರಹಿಸಿ, ಸಂಸ್ಕರಿಸಿ, ಬ್ರ್ಯಾಂಡಿಂಗ್ ಮೂಲಕ ಮಾರುಕಟ್ಟೆಗೆ ಪರಿಚಯಿಸುತ್ತದೆ. ಇದರಿಂದ ಉತ್ಪಾದಕರಿಗೆ ನ್ಯಾಯಯುತ ಆದಾಯ ದೊರೆಯುವುದರ ಜೊತೆಗೆ ಗ್ರಾಹಕರಿಗೂ ಗುಣಮಟ್ಟದ ವಸ್ತುಗಳು ಲಭ್ಯವಾಗುತ್ತವೆ. ಸಂಸ್ಥೆಯು ಸ್ವಸಹಾಯ ಸಂಘಗಳ (Self Help Groups) ಮೂಲಕ ಮಹಿಳೆಯರನ್ನು ಸಂಘಟಿಸಿ, ಉಳಿತಾಯದ ಅಭ್ಯಾಸ ಬೆಳೆಸುವುದಲ್ಲದೆ, ಸಣ್ಣ ಮಟ್ಟದ ಉದ್ಯಮಗಳನ್ನು ಆರಂಭಿಸಲು ಪ್ರೇರೇಪಿಸುತ್ತದೆ. ಬ್ಯಾಂಕ್‌ಗಳೊಂದಿಗೆ ಸಂಪರ್ಕ ಕಲ್ಪಿಸಿ ಸಾಲ ಸೌಲಭ್ಯಗಳನ್ನು ಒದಗಿಸುವ ಮೂಲಕ ಮಹಿಳೆಯರಲ್ಲಿ ಆತ್ಮವಿಶ್ವಾಸವನ್ನು ಹೆಚ್ಚಿಸುತ್ತದೆ. ಈ ಮಾದರಿಯು ಗ್ರಾಮೀಣ ಆರ್ಥಿಕತೆಯನ್ನು ಬಲಪಡಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿದೆ. ಇದಲ್ಲದೆ, ಸಂಸ್ಥೆಯು ಗುಣಮಟ್ಟ ಮತ್ತು ಸ್ವಚ್ಛತೆಗೆ ಹೆಚ್ಚಿನ ಪ್ರಾಮುಖ್ಯತೆ ನೀಡುತ್ತದೆ.

**ಗ್ರಾಮೀಣ ಮಹಿಳೆಯರ ಕೈಗೆ ಕೆಲಸ, ಮನೆಗೆ ಆದಾಯವನ್ನು ತಂದುಕೊಡುವ ಮೂಲಕ 'ಸಿರಿ' ಸಸ್ಥೆಯು ನಾಡಿನ ಆರ್ಥಿಕ ಪ್ರಗತಿಯಲ್ಲಿ ಮಹತ್ತರ ಪಾತ್ರ ವಹಿಸುತ್ತಿದೆ.**







KARAVALI THARANGINI Weekly Owned, Editor, Published & Printed by Lalithasri Preetham Rai No.2-64/54(12), Pushparaj Nilaya, Jayanagara, 3rd 'A' Maroli Village, Dakshina Kannada, Karnataka - 575005.
email: karavalitharangini@gmail.com, web: karavalitharangini.com ph: 9880109212 Printed at Bhima Samskruthi Printers & Publishers, No 1182 14th Main Road Prakash Nagar, Bengaluru Karnataka-560021